ಸಂಪುಟ 01 | ಸಂಚಿಕೆ 187 ಶುಕ್ರವಾರ 11 ಸೆಪ್ಟೆಂಬರ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE
ಸತ್ಯದ ದಿಕ್ಕು TRUE PATH
ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING
ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ವಿಶ್ವ ಸಹೋದರತಾ ದಿನ:**
1893ರ ಸೆಪ್ಟೆಂಬರ್ 11ರಂದು ಅಮೆರಿಕದ ಚಿಕಾಗೋದಲ್ಲಿ ನಡೆದ ವಿಶ್ವ ಧರ್ಮ ಸಮ್ಮೇಳನದಲ್ಲಿ ಸ್ವಾಮಿ ವಿವೇಕಾನಂದರು "ಅಮೆರಿಕದ ಸಹೋದರ ಸಹೋದರಿಯರೇ" ಎಂಬರ್ಥದ ಭಾಷಣವನ್ನು ಆರಂಭಿಸಿದರು.

**2) ಭಯೋತ್ಪಾದನಾ ದಾಳಿಯ ಸ್ಮರಣೆ:**
2001ರ ಸೆಪ್ಟೆಂಬರ್ 11ರಂದು ಅಮೆರಿಕದ ವರ್ಲ್ಡ್ ಟ್ರೇಡ್ ಸೆಂಟರ್ ಮೇಲೆ ಭೀಕರ ಭಯೋತ್ಪಾದನಾ ದಾಳಿ ನಡೆಯಿತು.ಈ ದುರ್ಘಟನೆಯಲ್ಲಿ ಮೃತರಾದವರ ಸ್ಮರಣೆಗಾಗಿ ಅಮೆರಿಕ ಹಾಗೂ ವಿಶ್ವದಾದ್ಯಂತ ಈ ದಿನವನ್ನು ಶ್ರದ್ಧಾಂಜಲಿ ದಿನವಾಗಿ ಆಚರಿಸಲಾಗುತ್ತದೆ.

**3) ಮಹಾಕವಿ ಸುಬ್ರಹ್ಮಣ್ಯ ಭಾರತಿ ಪುಣ್ಯತಿಥಿ:**
ಪ್ರಸಿದ್ಧ ಸ್ವಾತಂತ್ರ್ಯ ಹೋರಾಟಗಾರ ಹಾಗೂ ತಮಿಳಿನ ದಿಗ್ಗಜ ಕವಿ ಮಹಾಕವಿ ಸುಬ್ರಹ್ಮಣ್ಯ ಭಾರತಿಯವರು ನಿಧನರಾದ ದಿನವೂ ಹೌದು. ಇವರ ದೇಶಪ್ರೇಮದ ಸಾಹಿತ್ಯವನ್ನು ಈ ದಿನ ಸ್ಮರಿಸಲಾಗುತ್ತದೆ.

## ಸುಭಾಷಿತ

ಹಣದಿಂದ ಹಣದ ಹಸಿವು ಹೆಚ್ಚುತ್ತದೆಯೇ ಹೊರತು, ತೃಪ್ತಿ ಸಿಕ್ಕಲಾರದು.
–ಪ್ರೇಮ್‌ಚಂದ್

ನೈಜ್ಯ ದೆಸೆ ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಆತ್ಮಹತ್ಯೆ ಯಾವುದೇ ಸಮಸ್ಯೆಗೆ ಪರಿಹಾರವಲ್ಲ: ಗೀತಾ ಹಿರೇಮಠ

### ಸನ್‌ರೈಸ್ ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಯಚೂರು, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ, ಸಿಂಧನೂರು, ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗ, ರಾಯಚೂರು ಹಾಗೂ ಸನ್ ರೈಸ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್ ಇವರ ಸಂಯುಕ್ತ ಆಶ್ರಯದಲ್ಲಿ ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆಯನ್ನು ಸನ್ ರೈಸ್ ಕಾಲೇಜಿನಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು.ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶ್ರೀಮತಿ ಗೀತಾ ಹಿರೇಮಠ ಹಾಗೂ ನರ್ಸಿಂಗ್ ವಿಭಾಗದ ಪ್ರಾಚಾರ್ಯರಾದ ಲಾಜರ್ ಸಿರಿಲ್ ಜಿ. ಉಪಸ್ಥಿತರಿದ್ದರು. ಅವರು ವಿದ್ಯಾರ್ಥಿಗಳಿಗೆ ಮಾನಸಿಕ ಆರೋಗ್ಯ, ಆತ್ಮಹತ್ಯೆ ತಡೆ ಹಾಗೂ ಸಂಕಷ್ಟದಲ್ಲಿರುವ ವ್ಯಕ್ತಿಗಳಿಗೆ ನೀಡಬೇಕಾದ ನೆರವಿನ ಕುರಿತು ಸವಿಸ್ತಾರವಾಗಿ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷರಾದ ಶ್ರೀ ಇರ್ಫಾನ್ ಕೆ. ಹತ್ತಾರು ಅವರು ಸಹ ಉಪಸ್ಥಿತರಿದ್ದರು.ಮಾನಸಿಕ ಆರೋಗ್ಯದ ಬಗ್ಗೆ ಮಾತನಾಡುವುದು ದೌರ್ಬಲ್ಯವಲ್ಲ: ಗೀತಾ ಹಿರೇಮಠಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶ್ರೀಮತಿ ಗೀತಾ ಹಿರೇಮಠ ಮಾತನಾಡಿ, ದೈಹಿಕ ಆರೋಗ್ಯದಷ್ಟೇ ಮಾನಸಿಕ ಆರೋಗ್ಯವೂ ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು. ಒತ್ತಡ, ಆತಂಕ, ಖಿನ್ನತೆ, ಏಕಾಂತ, ಕುಟುಂಬದ ಸಮಸ್ಯೆಗಳು, ಸಂಬಂಧಗಳಲ್ಲಿನ ತೊಂದರೆಗಳು, ಆರ್ಥಿಕ ಸಮಸ್ಯೆಗಳು ಹಾಗೂ ಶೈಕ್ಷಣಿಕ ಒತ್ತಡಗಳು ವ್ಯಕ್ತಿಯ ಮಾನಸಿಕ ಆರೋಗ್ಯದ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ ಎಂದರು. ವಿದ್ಯಾರ್ಥಿಗಳಲ್ಲಿ ಕೆಲವೊಮ್ಮೆ "ನನ್ನ ಸಮಸ್ಯೆಯನ್ನು ಯಾರೂ ಅರ್ಥಮಾಡಿಕೊಳ್ಳುವುದಿಲ್ಲ", "ನನ್ನಿಂದ ಏನೂ ಸಾಧ್ಯವಿಲ್ಲ", "ನಾನು ಎಲ್ಲರಿಗೂ ಹೊರೆಯಾಗಿದ್ದೇನೆ" ಎಂಬಂತಹ ನಕಾರಾತ್ಮಕ ಆಲೋಚನೆಗಳು ಮೂಡಬಹುದು. ಇಂತಹ ಸಂದರ್ಭದಲ್ಲಿ ಆ ವ್ಯಕ್ತಿಯನ್ನು ಟೀಕಿಸುವ ಬದಲು ಅವರ ಮಾತನ್ನು ಶಾಂತವಾಗಿ ಆಲಿಸಿ, ಮಾನವೀಯವಾಗಿ ಮಾತನಾಡುವುದು ಬಹಳ ಮುಖ್ಯ ಎಂದು ಹೇಳಿದರು.ಆತ್ಮಹತ್ಯೆಯ ಬಗ್ಗೆ



ಮಾತನಾಡುತ್ತಿರುವ ವ್ಯಕ್ತಿಯ ಮಾತನ್ನು "ಅದು ಏನೂ ಅಲ್ಲ", "ಧೈರ್ಯವಾಗಿರು", "ಇದಕ್ಕಾಗಿ ಯಾಕೆ ಸಾಯಬೇಕು?" ಎಂದು ನಿರ್ಲಕ್ಷಿಸದೆ, ಅವರ ಭಾವನೆಗಳನ್ನು ಅರ್ಥಮಾಡಿಕೊಂಡು ಅವರನ್ನು ಒಂಟಿಯಾಗಿರದಂತೆ ನೋಡಿಕೊಳ್ಳಬೇಕು. ಅಗತ್ಯವಿದ್ದಲ್ಲಿ ಕುಟುಂಬದವರು, ಶಿಕ್ಷಕರು, ಆರೋಗ್ಯ ಕಾರ್ಯಕರ್ತರು, ಆಪ್ತಸಮಾಲೋಚಕರು ಅಥವಾ ಮಾನಸಿಕ ಆರೋಗ್ಯ ತಜ್ಞರ ಸಹಾಯ ಪಡೆಯಬೇಕು ಎಂದು ಸಲಹೆ ನೀಡಿದರು.ಸಮಸ್ಯೆಯಿಂದ ಓಡಬೇಡಿ; ಸಹಾಯವನ್ನು ಹುಡುಕಿ: ಲಾಜರ್ ಸಿರಿಲ್ ಜಿ.ನರ್ಸಿಂಗ್ ವಿಭಾಗದ ಪ್ರಾಚಾರ್ಯರಾದ ಲಾಜರ್ ಸಿರಿಲ್ ಜಿ. ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಆತ್ಮಸ್ಥೈರ್ಯ ತುಂಬುವ ಮಾತುಗಳನ್ನಾಡಿದರು."ಜೀವನದಲ್ಲಿ ಸಮಸ್ಯೆಗಳು ಬರುವುದು ಸಹಜ. ಆದರೆ ಯಾವುದೇ ಸಮಸ್ಯೆ ಶಾಶ್ವತವಲ್ಲ. ಇಂದು ನಮ್ಮನ್ನು ಕಾಡುತ್ತಿರುವ ನೋವು ನಾಳೆ ನಮ್ಮನ್ನು ಇನ್ನಷ್ಟು ಬಲಿಷ್ಠರನ್ನಾಗಿ ಮಾಡಬಹುದು. ಆದ್ದರಿಂದ ಒಂದು ಕಷ್ಟದ ಕ್ಷಣದಲ್ಲಿ ತೆಗೆದುಕೊಳ್ಳುವ ಶಾಶ್ವತ ನಿರ್ಧಾರದಿಂದ ಅಮೂಲ್ಯವಾದ ಜೀವನವನ್ನು ಕಳೆದುಕೊಳ್ಳಬಾರದು" ಎಂದು ಹೇಳಿದರು.ವಿದ್ಯಾರ್ಥಿಗಳು ತಮ್ಮನ್ನು ಇತರರೊಂದಿಗೆ ಹೋಲಿಸಿಕೊಂಡು ನಿರಾಶರಾಗಬಾರದು. ಪ್ರತಿಯೊಬ್ಬರ ಜೀವನಕ್ಕೂ ತನ್ನದೇ ಆದ ವೇಗ ಮತ್ತು ಮೌಲ್ಯವಿದೆ. ವಿಫಲತೆ ಎಂದರೆ ಜೀವನದ ಅಂತ್ಯವಲ್ಲ; ಅದು ಮತ್ತೆ ಪ್ರಯತ್ನಿಸುವ ಅವಕಾಶ ಎಂದು ಆತ್ಮವಿಶ್ವಾಸ ತುಂಬಿದರು."ಅಂಕಗಳು ಕಡಿಮೆಯಾಗಬಹುದು,



ಪರೀಕ್ಷೆಯಲ್ಲಿ ಸೋಲು ಬರಬಹುದು, ಸಂಬಂಧಗಳಲ್ಲಿ ಸಮಸ್ಯೆಯಾಗಬಹುದು, ಒಂದು ಅವಕಾಶ ಕೈತಪ್ಪಬಹುದು; ಆದರೆ ಜೀವನ ಕೈತಪ್ಪಬಾರದು" ಎಂದು ವಿದ್ಯಾರ್ಥಿಗಳಿಗೆ ಮನಮುಟ್ಟುವ ಸಂದೇಶ ನೀಡಿದರು.ಸಂಕಷ್ಟದಲ್ಲಿರುವ ಸ್ನೇಹಿತನನ್ನು ಕಂಡಾಗ "ಏನಾಯಿತು?" ಎಂದು ಕೇಳುವುದು, ಅವರ ಮಾತನ್ನು ಆಲಿಸುವುದು, ಅವರೊಂದಿಗೆ ಸಮಯ ಕಳೆಯುವುದು ಮತ್ತು ಅಗತ್ಯವಿದ್ದಾಗ ಸೂಕ್ತ ಸಹಾಯಕ್ಕೆ ಸಂಪರ್ಕಿಸುವುದು ಕೂಡ ಒಂದು ಜೀವ ಉಳಿಸುವ ಕಾರ್ಯವಾಗಬಹುದು ಎಂದು ತಿಳಿಸಿದರು.ಆತ್ಮಹತ್ಯೆ ತಡೆಗೆ ಆಪ್ತಸಮಾಲೋಚನೆ ಅತ್ಯಂತ ಅಗತ್ಯ ಕಾರ್ಯಕ್ರಮದಲ್ಲಿ ಆತ್ಮಹತ್ಯೆ ತಡೆಗಟ್ಟುವಲ್ಲಿ ಆಪ್ತಸಮಾಲೋಚನೆಯ ಮಹತ್ವದ ಕುರಿತು ವಿಶೇಷವಾಗಿ ತಿಳಿಸಲಾಯಿತು.ಮಾನಸಿಕ ಒತ್ತಡ ಅಥವಾ ಆತ್ಮಹತ್ಯೆಯ ಆಲೋಚನೆ ಎದುರಿಸುತ್ತಿರುವ ವ್ಯಕ್ತಿಯನ್ನು ಒಂಟಿಯಾಗಿ ಬಿಡದೆ, ವಿಶ್ವಾಸಾರ್ಹ ವ್ಯಕ್ತಿಯೊಂದಿಗೆ ಮಾತನಾಡಲು ಪ್ರೋತ್ಸಾಹಿಸಬೇಕು. ಅಗತ್ಯವಿದ್ದರೆ ಮಾನಸಿಕ ಆರೋಗ್ಯ ವೃತ್ತಿಪರರು, ಆಪ್ತಸಮಾಲೋಚಕರು, ವೈದ್ಯರು ಹಾಗೂ ಸರ್ಕಾರಿ ಆರೋಗ್ಯ ಸೇವೆಗಳ ನೆರವು ಪಡೆಯಬೇಕು.ವಿದ್ಯಾರ್ಥಿಗಳು ತಮ್ಮ ಸ್ನೇಹಿತರಲ್ಲಿ ವರ್ತನೆಯಲ್ಲಿನ ಅಸಾಮಾನ್ಯ ಬದಲಾವಣೆ, ಅತಿಯಾದ ಏಕಾಂತ, ನಿರಾಶೆಯ ಮಾತುಗಳು, ಭವಿಷ್ಯದ ಬಗ್ಗೆ ಆಸಕ್ತಿ ಕಳೆದುಕೊಳ್ಳುವುದು ಅಥವಾ ನಿರಂತರ ಮಾನಸಿಕ ಒತ್ತಡದ ಲಕ್ಷಣಗಳನ್ನು ಗಮನಿಸಿದರೆ, ಅದನ್ನು ನಿರ್ಲಕ್ಷಿಸದೆ ವಿಶ್ವಾಸಾರ್ಹ ಹಿರಿಯರು ಅಥ



ವಾ ಆರೋಗ್ಯ ತಜ್ಞರ ಗಮನಕ್ಕೆ ತರಬೇಕು ಎಂದು ತಿಳಿಸಲಾಯಿತು.ಸರ್ಕಾರಿ ಸಹಾಯವಾಣಿ: ಸಹಾಯ ಕೇಳಲು ಹಿಂಜರಿಯಬೇಡಿ ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದ ತುರ್ತು ಅಥವಾ ಸಂಕಷ್ಟದ ಸಂದರ್ಭದಲ್ಲಿ **Tele-MANAS – 14416** ಅಥವಾ **1-800-891-4416** ಸಹಾಯವಾಣಿಯನ್ನು ಸಂಪರ್ಕಿಸಬಹುದು. ಇದು ಭಾರತ ಸರ್ಕಾರದ ಟೆಲಿ-ಮಾನಸಿಕ ಆರೋಗ್ಯ ಸೇವೆಯಾಗಿದ್ದು, ಮಾನಸಿಕ ಆರೋಗ್ಯ ಸಂಬಂಧಿತ ಸಹಾಯ ಮತ್ತು ಆಪ್ತಸಮಾಲೋಚನೆ ಪಡೆಯಲು ಬಳಸಬಹುದು.ತಕ್ಷಣದ ಅಪಾಯ ಅಥವಾ ತುರ್ತು ಪರಿಸ್ಥಿತಿ ಇದ್ದಲ್ಲಿ 112 ತುರ್ತು ಸೇವೆಯನ್ನು ಸಂಪರ್ಕಿಸುವುದು ಅಥವಾ ಸಮೀಪದ ಸರ್ಕಾರಿ ಅಥವಾ ಅಂಗೀಕೃತ ಆಸ್ಪತ್ರೆಯ ತುರ್ತು ವಿಭಾಗಕ್ಕೆ ತೆರಳುವುದು ಸೂಕ್ತ.ವಿದ್ಯಾರ್ಥಿಗಳೇ ಜಾಗೃತಿಯ ರಾಯಭಾರಿಗಳಾಗಬೇಕುಸಂಸ್ಥೆಯ ಅಧ್ಯಕ್ಷರಾದ ಶ್ರೀ ಇರ್ಫಾನ್ ಕೆ. ಹತ್ತಾರು ಮಾತನಾಡಿ, ಆತ್ಮಹತ್ಯೆ ತಡೆ ಮತ್ತು ಮಾನಸಿಕ ಆರೋಗ್ಯದ ಕುರಿತು ಕೇವಲ ಕಾರ್ಯಕ್ರಮದ ದಿನ ಮಾತ್ರವಲ್ಲದೆ ನಿರಂತರವಾಗಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಹೇಳಿದರು."ನಾವು ಜಾಗೃತರಾಗಬೇಕು; ನಮ್ಮ ಸ್ನೇಹಿತರು,ಕುಟುಂಬದವರು ಮತ್ತು ಸಮಾಜದಲ್ಲಿರುವವರನ್ನೂ ಜಾಗೃತಗೊಳಿಸಬೇಕು. ಒಬ್ಬ ವ್ಯಕ್ತಿಯ ನೋವನ್ನು ಅರ್ಥಮಾಡಿಕೊಂಡು, ಸರಿಯಾದ ಸಮಯದಲ್ಲಿ ಸರಿಯಾದ ಸಹಾಯಕ್ಕೆ ಕರೆದೊಯ್ಯುವುದರಿಂದ ಒಂದು ಅಮೂಲ್ಯ ಜೀವವನ್ನು ಉಳಿಸಬಹುದು" ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

# ಶಿಕ್ಷಕರೇ ಜೀವನದ ಗುರು ಗೌರಮ್ಮ ಕುಡತಿನಿ

ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ತಾಯಿ ಮಗುವಿನ ಮೊದಲ ಗುರುವಾದರೆ, ಶಿಕ್ಷಕರು ಮಗುವಿನ ಜೀವನದ ಗುರು. ಶಿಕ್ಷಕರೇ ಮಕ್ಕಳ ಉಜ್ವಲ ಭವಿಷ್ಯಕ್ಕೆ ದಾರಿದೀಪವಾಗಿದ್ದು, ರಾಷ್ಟ್ರದ ಭವಿಷ್ಯವನ್ನು ರೂಪಿಸುವ ನಿಜವಾದ ನಿರ್ಮಾತೃಗಳು ಎಂದು ಇನ್ನರ್ ವೀಲ್ ಕ್ಲಬ್ ಕುಷ್ಟಗಿ ಅಧ್ಯಕ್ಷೆ ಗೌರಮ್ಮ ಕುಡತಿನಿ ಹೇಳಿದರು.**

ಇನ್ನರ್ ವೀಲ್ ಕ್ಲಬ್ ಕುಷ್ಟಗಿ ವತಿಯಿಂದ ಅಧ್ಯಕ್ಷೆ ಗೌರಮ್ಮ ಕುಡತಿನಿ ಅವರ ನೇತೃತ್ವದಲ್ಲಿ ಶಿಕ್ಷಕರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಇನ್ನರ್ ವೀಲ್ ಅಸೋಸಿಯೇಷನ್ ವತಿಯಿಂದ ನೀಡಲಾಗುವ "ಂಠಿಂಡಿಜಚಿಖಿಚಿ-ಣುಶಟಿ ಣಂ ಖಿಜಚಿಛಿಖಿಜಡಿ ? ಓಚಿ-ಣುಶಟಿ ಃಣುಟಜಜಡಿ" ಪ್ರಶಸ್ತಿಯ ಪ್ರಮಾಣಪತ್ರಗಳನ್ನು ಕಂದಕೂರು ಶಾಲೆಯ ಎಲ್ಲ ಶಿಕ್ಷಕರಿಗೆ ನೀಡಿ ಗೌರವಿಸಲಾಯಿತು. ಅಲ್ಲದೆ, ಇನ್ನರ್ ವೀಲ್ ಕ್ಲಬ್‌ನ ಹೆಸರಿರುವ ಬ್ಯಾಗ್‌ಗಳನ್ನು ಶಿಕ್ಷಕರಿಗೆ ಉಡುಗೊರೆಯಾಗಿ ನೀಡಿ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಕೇಕ್ ಕತ್ತರಿಸಿ ಶಿಕ್ಷಕರೊಂದಿಗೆ ಸಂತೋಷ ಹಂಚಿಕೊಳ್ಳಲಾಯಿತು.




ವಿವಿಧ ಮನರಂಜನಾ ಆಟಗಳನ್ನು ಆಯೋಜಿಸಿ, ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಪ್ರಶಸ್ತಿ ವಿತರಣಾ ಸಮಾರಂಭವನ್ನು ಡಾ. ಪಾರ್ವತಿ ಪಲೋಟಿ ನಿರ್ವಹಿಸಿ, ಶಿಕ್ಷಕರ ದಿನಾಚರಣೆಯ ಮಹತ್ವ ಹಾಗೂ ಶಿಕ್ಷಕರ ಪಾತ್ರದ ಕುರಿತು ಮಾತನಾಡಿದರು. ಕ್ಲಬ್‌ನ ಕಾರ್ಯದರ್ಶಿ ಶ್ರೀದೇವಿ ಮಸ್ಕಿಮಠ್ ಅವರು ಶಿಕ್ಷಕರೊಂದಿಗೆ ವಿವಿಧ ಆಟಗಳಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರುಗು ತಂದರು. ಶಾರದಾ ಶೆಟ್ಟರ್ ವಂದನಾರ್ಪಣೆ ಸಲ್ಲಿಸಿದರು.

ಮಕ್ಕಳ ಜ್ಞಾನ, ವ್ಯಕ್ತಿತ್ವ ಹಾಗೂ ಉಜ್ವಲ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರು ಸಲ್ಲಿಸುತ್ತಿರುವ ಅಮೂಲ್ಯ ಸೇವೆಯನ್ನು ಗೌರವಿಸಿದ ಈ ಕಾರ್ಯಕ್ರಮ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. "ಶಿಕ್ಷಕರನ್ನು ಗೌರವಿಸುವುದು ಎಂದರೆ ಭವಿಷ್ಯವನ್ನು ಗೌರವಿಸುವುದು" ಎಂಬ ಸಂದೇಶವನ್ನು ಕಾರ್ಯಕ್ರಮ ಸಾರಿತು.

# ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಕವಿತಾಳ ಪೊಲೀಸ್ ಠಾಣೆಯಲ್ಲಿ ಶಾಂತಿ ಸಭೆ

ನೈಜ್ಯ ದೆಸೆ ನ್ಯೂಸ್

**ಕವಿತಾಳ: ಮುಂಬರುವ ಗಣೇಶ ಚತುರ್ಥಿ ಹಬ್ಬವನ್ನು ಶಾಂತಿಯುತ ಹಾಗೂ ಸೌಹಾರ್ದಯುತವಾಗಿ ಆಚರಿಸುವ ಹಿನ್ನೆಲೆಯಲ್ಲಿ ಕವಿತಾಳ ಪೊಲೀಸ್ ಠಾಣೆಯಲ್ಲಿ ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (SP) ಅವರ ಅಧ್ಯಕ್ಷತೆಯಲ್ಲಿ ಸಾರ್ವಜನಿಕರು ಹಾಗೂ ಗಣೇಶೋತ್ಸವ ಸಮಿತಿಗಳ ಪದಾಧಿಕಾರಿಗಳೊಂದಿಗೆ ಶಾಂತಿ ಸಭೆ ನಡೆಸಲಾಯಿತು.**

ಸಭೆಯಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪನೆ, ಪೂಜೆ, ವಿಸರ್ಜನೆ ಹಾಗೂ ಮೆರವಣಿಗೆ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಸಾರ್ವಜನಿಕರಿಗೆ ಸಲಹೆ?ಸೂಚನೆಗಳನ್ನು ನೀಡಲಾಯಿತು. ಹಬ್ಬದ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವುದು, ಶಾಂತಿ ಮತ್ತು ಸೌಹಾರ್ದತೆ ಕಾಪಾಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಎಸ್‌ಪಿ ಅವರು ತಿಳಿಸಿದರು.

ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಅಗತ್ಯ ಅನುಮತಿ ಪಡೆಯಬೇಕು. ಮೆರವಣಿಗೆಯ ಮಾರ್ಗ, ಸಮಯ ಹಾಗೂ ಧ್ವನಿವರ್ಧಕ ಬಳಕೆ ಸೇರಿದಂತೆ ಪೊಲೀಸ್ ಇಲಾಖೆ ಹಾಗೂ ಸಂಬಂಧಿಸಿದ ಅಧಿಕಾರಿಗಳು ನೀಡುವ ನಿಯಮ?ನಿಬಂಧನೆಗಳನ್ನು ಕಡ್ಡಾಯವಾಗಿ




ಪಾಲಿಸಬೇಕು ಎಂದು ಸೂಚಿಸಲಾಯಿತು.

ಯಾವುದೇ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟುಮಾಡುವಂತಹ ಘೋಷಣೆ, ಬ್ಯಾನರ್, ಪೋಸ್ಟರ್ ಅಥವಾ ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಸಂದೇಶಗಳನ್ನು ಹರಡದಂತೆ ಎಚ್ಚರಿಕೆ ನೀಡಲಾಯಿತು. ಸಾಮಾಜಿಕ ಜಾಲತಾಣಗಳಲ್ಲಿ ಹರಡುವ ವದಂತಿಗಳಿಗೆ ಕಿವಿಗೊಡದೆ, ಯಾವುದೇ ಅನುಮಾನಾಸ್ಪದ ಮಾಹಿತಿ ಕಂಡುಬಂದಲ್ಲಿ ಕೂಡಲೇ ಪೊಲೀಸರ ಗಮನಕ್ಕೆ ತರುವಂತೆ ಸಾರ್ವಜನಿಕರಿಗೆ ಮನವಿ ಮಾಡಲಾಯಿತು.

ಅದೇ ರೀತಿ, ಗಣೇಶೋತ್ಸವ ಹಾಗೂ ವಿಸರ್ಜನಾ ಮೆರವಣಿಗೆಯ ಸಂದರ್ಭದಲ್ಲಿ ಸಂಚಾರ ನಿಯಮಗಳನ್ನು ಪಾಲಿಸುವುದು, ಸಾರ್ವಜನಿಕರಿಗೆ ತೊಂದರೆಯಾಗದಂತೆ ಮೆರವಣಿಗೆ ನಡೆಸುವುದು ಹಾಗೂ ಶಾಂತಿ ಭಂಗಕ್ಕೆ ಕಾರಣವಾಗುವ ಯಾವುದೇ ಚಟುವಟಿಕೆಗಳಿಗೆ ಅವಕಾಶ ನೀಡದಂತೆ ಸಮಿತಿಗಳ ಪದಾಧಿಕಾರಿಗಳಿಗೆ ಸೂಚಿಸಲಾಯಿತು.

ಗಣೇಶ ಹಬ್ಬವು ಎಲ್ಲ ಧರ್ಮದ ಜನರು ಪರಸ್ಪರ ಸಹೋದರತ್ವ, ಸೌಹಾರ್ದತೆ ಹಾಗೂ ಶಾಂತಿಯಿಂದ ಆಚರಿಸುವ ಹಬ್ಬವಾಗಬೇಕು. ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ, ಪೊಲೀಸ್ ಇಲಾಖೆಯೊಂದಿಗೆ ಸಾರ್ವಜನಿಕರು ಸಂಪೂರ್ಣ ಸಹಕಾರ ನೀಡಬೇಕು ಎಂದು ಎಸ್‌ಪಿ ಅವರು ಮನವಿ ಮಾಡಿದರು.

ಸಭೆಯಲ್ಲಿ ಪೊಲೀಸ್ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ, ಗಣೇಶೋತ್ಸವ ಸಮಿತಿಗಳ ಪದಾಧಿಕಾರಿಗಳು, ವಿವಿಧ ಸಂಘ?ಸಂಸ್ಥೆಗಳ ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಬದುಕನ್ನು ಪರಿವರ್ತಿಸಿಕೊಳ್ಳಲು ಬಸವ ತತ್ವಗಳು ಬಳಕೆಗೊಳ್ಳಬೇಕು: ಪಿ.ರುದ್ರಪ್ಪ

ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ/ಕಂಪ್ಲಿ: ಪಟ್ಟಣದ ಜಾಗತಿಕ ಲಿಂಗಾಯತ ಮಹಾಸಭಾ, ರಾಷ್ಟ್ರೀಯ ಬಸವದಳ ಸೋಮವಾರ ಸಂಜೆ ವಚನ ದಾಸೋಹಿ ನಿವೃತ್ತ ಶಿಕ್ಷಕ ಬಿ.ವೀರಣ್ಣ, ಬಿ. ಸುನಿಲ್ ರವರ ನಿವಾಸದಲ್ಲಿ ಹಮ್ಮಿಕೊಂಡಿದ್ದ ವಚನ ಶ್ರಾವಣ ಕಾರ್ಯಕ್ರಮ ಸಡಗರ ಸಂಭ್ರಮಗಳಿಂದ ನಡೆಯಿತು. ವಿಜಯನಗರ ಜಿಲ್ಲಾ ಜಾಗತಿಕ ಲಿಂಗಾಯತ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಡಾ. ಕೆ ರವೀಂದ್ರನಾಥ ಮಾತನಾಡಿ, ಲಿಂಗಾಯತ ಧರ್ಮಗ್ರಂಥವೆನಿಸಿದ ವಚನ ಸಾಹಿತ್ಯದ ಸಂಗ್ರಹ-ಸಂಕಲನ ಮತ್ತು ಸಂಪಾದನಾ ಪರಂಪರೆಗೆ ವಿಜಯನಗರದ ಪ್ರೌಢದೇವರಾಯ ಮತ್ತು**




**ತೋಂಟದ ಸಿದ್ಧಲಿಂಗ ಯತಿಗಳ ಕಾಲದ ಸುದೀರ್ಘ ಇತಿಹಾಸವಿದೆ ಎಂದು ಹೇಳಿದರು.**

ಸಿಂಧನೂರಿನ ನಿವೃತ್ತ ವಾಣಿಜ್ಯ ತೆರಿಗೆ ಅಧಿಕಾರಿ ಪಿ.ರುದ್ರಪ್ಪ ಮಾತನಾಡಿ, ವಚನ ಸಾಹಿತ್ಯದಿಂದ ಕನ್ನಡ ಸಾಹಿತ್ಯ ಸಿರಿವಂತವಾಯಿತು. ಬದುಕನ್ನು ಪರಿವರ್ತಿಸಿಕೊಳ್ಳಲು ಬಸವ ತತ್ವ ಬಳಕೆಗೊಳ್ಳಬೇಕು. ಬಸವ ಸಾಹಿತ್ಯ ಪ್ರಸ್ತುತ ಜಗತ್ತಿಗೆ ಅನಿವಾರ್ಯತೆಯಿದೆ. ಲಿಂಗಾಯತರು ವಿಶಾಲ ಹೃದಯಿಗಳಾಗಬೇಕು. ಶರಣರು ಮನುಕುಲದ ವಿಸ್ತಾರ ತಿಳಿಸಿಕೊಟ್ಟರು ಎಂದರು. ಅಕ್ಕಮಹಾದೇವಿ ಮಹಿಳಾ ಮಂಡಳಿಯ ಅಧ್ಯಕ್ಷೆ ಡಾ.ಶಾರದಾ ಜಗನ್ನಾಥ ಹಿರೇಮಠ ಅಧ್ಯಕ್ಷತೆವಹಿಸಿ ಮಾತನಾಡಿದರು. ಅಕ್ಕನ ಬಳಗದ ಜಂಟಿ ಕಾರ್ಯದರ್ಶಿ ಬಿ.ಎಂ.ಪುಷ್ಪಾ 'ತನು ಕರಗದವರಲ್ಲಿ ಮಜ್ಜನವನೊಲ್ಲೆಯಯ್ಯಾ ನೀನು', ಅಕ್ಕನ ಬಳಗದ ನಿರ್ದೇಶಕಿ ರಶ್ಮಿ ಕಲ್ಗುಡಿ 'ಕಾಯಕ ನಿಂದಿತ್ತು ಹೋಗಯ್ಯ' ಕುರಿತು ಮಾತನಾಡಿದರು.

ಕೆ.ಎಂ.ರಕ್ಷಾ, ಮರಿಶೆಟ್ರು ಶಾಂತಾ, ಪಾಮಯ್ಯ ಶರಣರು ವಚನ ಗಾಯನ ಮಾಡಿದರು. ಜಾಗತಿಕ ಲಿಂಗಾಯತ ಮಹಾಸಭಾದ ವಿಜಯನಗರ ಜಿಲ್ಲೆ ಅಧ್ಯಕ್ಷ ಮಾವಿನಹಳ್ಳಿ ಬಸವರಾಜ, ಮಲಪನಗುಡಿಯ ಬಸವಾಶ್ರಮದ ಪೀಠಾಧ್ಯಕ್ಷ ಬಸವ ಕೃಪಾನಿಧಿ, ಶರಣ ಸಾಹಿತ್ಯ ಪರಿಷತ್ ಕಾರ್ಯಾಧ್ಯಕ್ಷ ಬಂಗಿ ದೊಡ್ಡ ಮಂಜುನಾಥ, ಪ್ರಮುಖರಾದ ಕೆ. ಎಂ.ಹೇಮಯ್ಯಸ್ವಾಮಿ, ಬಿ.ವೀರಣ್ಣ, ಡಾ.ಬಿ.ಸುನಿಲ್, ಮುದಕಪ್ಪ ನೆಲಜೇರಿ, ಬಿ.ಎಂ.ರುದ್ರಯ್ಯ, ಅಶೋಕ ಕುಕನೂರು, ಮರಿಶೆಟ್ರು ಸುರೇಶ್, ಚಂದ್ರಯ್ಯ ಸೊಪ್ಪಿಮಠ ಸೇರಿ ಇತರರಿದ್ದರು.?

**ವರದಿ: ಜಿಲಾನಸಾಬ್ ಬಡಿಗೇರ್**

## ಸಾಹಿತ್ಯ ಸಿಂಚನ

### ಗಾಳಿಗೆ ಬರೆದ ಪತ್ರ

ಗಾಳಿಗೆ ಬರೆದ ಪತ್ರವೊಂದು,
ಮೌನದ ಮಾತುಗಳ ಹೊತ್ತೊಯ್ದಿತು.
ಹೃದಯದೊಳಗಿದ್ದ ಕನಸುಗಳನ್ನೆಲ್ಲ,
ಮೆಲ್ಲನೆ ಬಂದು ಮುಟ್ಟಿಹೋಯಿತು.

ಮರದ ಎಲೆಗಳ ನಡುವೆ ಕುಳಿತು,
ನನ್ನ ನೆನಪುಗಳ ಹಾಡು ಕೇಳಿತು.
ಹೇಳಲಾಗದ ಸಾವಿರ ಮಾತುಗಳನ್ನು,
ದೂರದ ದಾರಿಗೆ ಕೊಂಡೊಯ್ದಿತು.

"ನನ್ನ ಕನಸು ಎಲ್ಲಿದೆ?" ಎಂದಾಗ,
ಗಾಳಿ ನಗುತ್ತಾ ದಾರಿ ತೋರಿಸಿತು.
"ನಿಲ್ಲಬೇಡ, ಮುಂದೆ ಸಾಗು" ಎಂದು,
ಹೊಸ ಭರವಸೆಯ ಬೀಜ ಬಿತ್ತಿತು.

ಮೋಡಗಳಾಚೆ ನನ್ನ ಆಸೆಗಳು,
ನಕ್ಷತ್ರಗಳಂತೆ ಮಿನುಗುತ್ತಿದ್ದವು.
ಗಾಳಿಯ ಜೊತೆ ಹಾರಿದ ಪತ್ರವು,
ನನ್ನ ಮನದ ಕಥೆಯಾಯಿತು.

ತಲುಪಬೇಕಾದ ವಿಳಾಸವಿಲ್ಲದಿದ್ದರೂ,
ಆ ಪತ್ರಕ್ಕೆ ಅರ್ಥವಿತ್ತು.
ಗಾಳಿಗೆ ಬರೆದ ಪ್ರತಿಯೊಂದು ಸಾಲು,
ನನ್ನ ಬದುಕಿನ ಕನಸಾಗಿತ್ತು.

# ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಕಾರ್ಯಕ್ರಮ

## ಆತ್ಮಹತ್ಯೆಯ ಕುರಿತು ದೃಷ್ಟಿಕೋನ ಬದಲಾಯಿಸೋಣ ಸಂವಾದವನ್ನು ಆರಂಭಿಸೋಣ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆಯ ಅಂಗವಾಗಿ ಸಮೀಪದ ಜವಳಗೇರಾ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯಲ್ಲಿ ಅರಗಿನ ಮರ ಕ್ಯಾಂಪ್ ಪುನರ್ವಸತಿ ಕೇಂದ್ರದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಕುರಿತು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು ಬಸ್ಸಯ್ಯ ಅವರು ಮಾತನಾಡಿದರು, ಆತ್ಮಹತ್ಯೆ ಎಂಬುದು ವೈಯಕ್ತಿಕ ಸಮಸ್ಯೆಯಲ್ಲ; ಅದು ಕುಟುಂಬ ಹಾಗೂ ಸಮಾಜದ ಮೇಲೂ ಗಂಭೀರ ಪರಿಣಾಮ ಬೀರುವ ಸಾರ್ವಜನಿಕ ಆರೋಗ್ಯ ಸಮಸ್ಯೆಯಾಗಿದೆ ಎಂದು ತಿಳಿಸಿದರು. ಮಾನಸಿಕ ಒತ್ತಡ, ಖಿನ್ನತೆ, ಆತಂಕ ಹಾಗೂ ಸಾಮಾಜಿಕ ಸಮಸ್ಯೆಗಳಿಂದ ಬಳಲುತ್ತಿರುವವ-




ರಿಗೆ ಸಮಯೋಚಿತ ನೆರವು, ಬೆಂಬಲ ಮತ್ತು ಪ್ರೋತ್ಸಾಹ ನೀಡುವುದು ಅಗತ್ಯವಾಗಿದೆ ಈಸಬೇಕು ಇದ್ದು ಜಯಸಬೇಕು ಎಂದು ಹೇಳಿದರು.

ನಂತರದಲ್ಲಿ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಈ ವರ್ಷದ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನದ ಘೋಷವಾಕ್ಯವಾದ "ಆತ್ಮಹತ್ಯೆಯ ಕುರಿತ ದೃಷ್ಟಿಕೋನವನ್ನು ಬದಲಾಯಿಸೋಣ ? ಸಂವಾದವನ್ನು ಆರಂಭಿಸೋಣ" ಎಂಬ ಸಂದೇಶವನ್ನು ಜನ-ರಿಗೆ ತಲುಪಿಸಲಾಯಿತು. ಮಾನಸಿಕ ಆರೋಗ್ಯದ ಕುರಿತು ಮುಕ್ತವಾಗಿ ಮಾತನಾಡುವುದು, ಸಂಕಷ್ಟದಲ್ಲಿರುವವರನ್ನು ಆಲಿಸುವುದು ಹಾಗೂ ಅಗತ್ಯವಿದ್ದಲ್ಲಿ ಆರೋಗ್ಯ ತಜ್ಞರ ಸಲಹೆ ಪಡೆಯುವುದು ಆತ್ಮಹತ್ಯೆ ತಡೆಗಟ್ಟುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು.

ಸಮಾಜದಲ್ಲಿ ಮಾನಸಿಕ ಆರೋಗ್ಯ ಸಮಸ್ಯೆಗಳ ಬಗ್ಗೆ ಇರುವ ತಪ್ಪು ಕಲ್ಪನೆಗಳು ಮತ್ತು ಕಳಂಕವನ್ನು ದೂರ ಮಾಡಿ, ಸಹಾನುಭೂತಿ ಹಾಗೂ ಬೆಂಬಲದ ವಾತಾವರಣ ನಿರ್ಮಿಸಬೇಕೆಂದು ಕರೆ ನೀಡಿದರು. ಯಾವುದೇ ವ್ಯಕ್ತಿ ನಿರಾಶೆ ಅಥವಾ ಮಾನಸಿಕ ಒತ್ತಡಕ್ಕೆ ಒಳಗಾದಾಗ ಕುಟುಂಬದ ಸದಸ್ಯರು, ಸ್ನೇಹಿತರು ಹಾಗೂ ಆರೋಗ್ಯ ಸಿಬ್ಬಂದಿಯೊಂದಿಗೆ ಮಾತನಾಡುವಂತೆ ಸಲಹೆ ನೀಡಲಾಯಿತು.

ಈ ಸಂದರ್ಭದಲ್ಲಿ ಅಂಗನವಾಡಿ ಮೇಲ್ವಿಚಾರಕರಾದ ಸುನಿತಾ ಸಜ್ಜನ್. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಪೋಷಣಾ ಅಭಿಯಾನದ ಸಂಯೋಜಕರಾದ ಮುತ್ತಣ್ಣ , ಆಶಾ ಕಾರ್ಯಕರ್ತೆಯರಾದ ಮಹೇಶ್ವರಿ ಅಂಗನವಾಡಿ ಕಾರ್ಯಕರ್ತೆಯರಾದ ಆದಿಲಕ್ಷ್ಮೀ ಬಸವಂತಮ್ಮ .ವಿಜಯಮ್ಮ. ಹಾಗೂ ತಾಯಿಂದಿರು . ಸಾರ್ವಜನಿಕರು ಭಾಗವಹಿಸಿದ್ದರು.

# ಸೆನ್ಸಾರ್‌ಗೆ ಹೊರಟ "ಮುತ್ತುರತ್ನ' ಚಲನಚಿತ್ರ

❑ ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಜೈ ಹನುಮಾನ್ ಪ್ರೊಡಕ್ಷನ್ ಅವರ 'ಮುತ್ತುರತ್ನ' ಎಂಬ ಕನ್ನಡ ಚಲನಚಿತ್ರ ಉಪಶೀರ್ಷಿಕೆ 'ಒಂದು ಪ್ರೇಮ ಗ್ರಂಥ' ಎಂಬ ಹೆಸರನ್ನು ಹೊಂದಿರುವ ಚಲನಚಿತ್ರದ ಪೋಸ್ಟ್ ಪ್ರೊಡಕ್ಷನ್ ಕಾರ್ಯ ಮುಕ್ತಾಯವಾಗಿ ಇದೀಗ ಸೆನ್ಸಾರಗೆ ಹೊರಟಿದೆ..

ಚಿತ್ರದುರ್ಗ ಹಾಗೂ ಹಿರಿಯೂರು ಸುತ್ತಮುತ್ತಲು 40 ದಿನಗಳ ಕಾಲ ಚಿತ್ರೀಕರಣವನ್ನು ನಡೆಸಲಾಗಿದೆ. ನಾಯಕ ನಟ ಅಶ್ವ ನಾಯಕ ನಟಿ ಸಹನಾ ಪ್ರಕಾಶ್, ತಿಪ್ಪೇಶ್ ಮುದ್ದಾಪುರ, ದೇವು ,ಮಲ್ಲಿಕಾ, ರಕ್ಷಿತಾ, ಗೋವಿಂದೇಗೌಡ, ಸಂಜು ಬಸಯ್ಯ, ಗಿರೀಶ್ ಜೊತೆ ಅಪೂರ್ವ ಪವನ್ ಮಜಾ ಟಾಕೀಸ್, ಹುಲುಗಪ್ಪ ಟಿ, ಕೇಶವಮೂರ್ತಿ ಜಿಎಚ್ ಬಿಜಿಕೆರೆ ಮೊದಲಾದ ಕಲಾವಿದರಿದ್ದಾರೆ.

ತಾಂತ್ರಿಕ ವರ್ಗ ಛಾಯಾಗ್ರಹಣ ಗೋಪಿನಾಥ ಎಂ, ಸಂಕಲನ ಶಿವರಾಜ್ ಮೇಹು, ಸಾಹಸ ಚಂದ್ರು ಬಂಡೆ, ನೃತ್ಯ ಬಾಲು ರೆಕ್ಸ್ ರಾಜು, ಸಾಹಿತ್ಯ ಎಸ್ ವಿ ಶಿವಕುಮಾರ್, ಡಿವಿಜಿ, ತಿಪ್ಪೇಶ್ ಹಾಲವರ್ತಿ ರಚಿಸಿದ್ದು, ಸಂಗೀತ ಪ್ರಸನ್ನ ಭೋಜಶೆಟ್ಟರ್, ಬಾಳು ಬೆಳಗುಂದಿ, ಐಶ್ವರ್ಯ ರಂಗರಾಜನ್, ಅನಿರುದ್ಧ ಶಾಸ್ತ್ರಿ, ಲಹರಿ ಮಹೇಶ್, ರವೀಂದ್ರ ಸೊರಗಾವಿ, ಅನುರಾಮ್, ಪ್ರಸನ್ನ ಭೋಜ ಶೆಟ್ಟರ್ ಮಧುರವಾಗಿ ಹಾಡಿದ್ದಾರೆ.

ಉತ್ತರ ಕರ್ನಾಟಕದ ನಾ ಡ್ರೈವರ್ ಪೂಜಾ




ಡಿಕೆಡಿ ಒಂದು ಹಾಡಿನಲ್ಲಿ ನೃತ್ಯ ಮಾಡಿದ್ದು ಉತ್ತರ ಕರ್ನಾಟಕದ ಮಂದಿಗೆ ಕಿಕ್ ಕೊಡುವುದರಲ್ಲಿ ಎರಡು ಮಾತಿಲ್ಲ. ಪ್ರಸಾಧನ ಚಂದ್ರು ತಿರುಪತಿ, ಎಂ.ಜಿ.ಕಲ್ಲೇಶ್ , ಡಾ. ಪ್ರಭು ಗಂಜಿಹಾಳ ಡಾ. ವೀರೇಶ್ ಹಂಡಿಗಿ ಅವರ ಪತ್ರಿಕಾ ಸಂಪರ್ಕ , ಸಹ ನಿರ್ದೇಶನ ಮಹೇಶ್ ಜಗತಾಪ್,ಸತೀಶ್ ಚೆಕ್ಕಂದವಾಡಿ, ನಿರ್ದೇಶನ ತಂಡ ರಂಜಿತ್, ಕುಶಾಲ್,ಅನೂಪ್, ಸ್ಟಿಲ್ ರಘು, ಚಿತ್ರಕ್ಕೆ ಕಥೆ-ಚಿತ್ರಕಥೆ-ಸಂಭಾಷಣೆ ಜೊತೆಗೆ ಸಾಹಿತ್ಯ ರಚಿಸಿ ನಿರ್ದೇಶನ ಹೊಣೆ ತಿಪ್ಪೇಶ್ ಹಾಲುವರ್ತಿ ಹೊತ್ತಿದ್ದಾರೆ, ಹುಲುಗಪ್ಪ ಟಿ, ರುದ್ರಪ್ಪ ಪಿಎಚ್ ಬಂಡವಾಳ ಹಾಕಿದ್ದು ಇವರ ಜೊತೆಗೆ ಕೇಶವಮೂರ್ತಿ ಜಿಎಚ್ ಬಿಜಿಕೆರೆ -ಯಶೋದ ಬಾಯಿ ಸಹ ನಿರ್ಮಾಪಕರಾಗಿದ್ದಾರೆ. ಚಿತ್ರ ಉತ್ತಮವಾಗಿ ಮೂಡಿ ಬಂದಿದ್ದು ಸೆನ್ಸಾರದಿಂದ ಬಂದ ತಕ್ಷಣ ಚಿತ್ರ ಬಿಡುಗಡೆ ಮಾಡುವದಾಗಿ ಚಿತ್ರತಂಡ ತಿಳಿಸಿದೆ.

## ಮುದಗಲ್‌ನಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಕ್ರಮಕ್ಕೆ ಆಗ್ರಹ

❑ ನೈಜ್ಯ ದೆಸೆ ನ್ಯೂಸ್

ಮುದಗಲ್: ಮುದಗಲ್ ಪಟ್ಟಣದ ವಾರ್ಡ್ ನಂ. 01 ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು, ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಅಖಿಲ ಭಾರತ ಮಜ್ಲಿಸ್-ಎ-ಇತ್ತೇಹಾದುಲ್ ಮುಸ್ಲಿಮೀನ್ ಮುದಗಲ್ ಬ್ಲಾಕ್ ಅಧ್ಯಕ್ಷ ಅಬೀದ್ ಬೆಳ್ಳಿಕಟ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿ, ಸಮಸ್ಯೆಯನ್ನು ಶೀಘ್ರವಾಗಿ ಪರಿಹರಿಸುವಂತೆ ಆಗ್ರಹಿಸಿದ್ದಾರೆ.




ಪಟ್ಟಣದ ಹಲವು ಬಡಾವಣೆಗಳಲ್ಲಿ ಕಳೆದ 12?13 ದಿನಗಳಿಂದ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಯಾಗುತ್ತಿಲ್ಲ. ಇದರಿಂದ ಸಾರ್ವಜನಿಕರು ದೂರದ ಪ್ರದೇಶಗಳಿಗೆ ತೆರಳಿ ನೀರು ತರುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ಕೂಡಲೇ ನೀರು ಪೂರೈಕೆ ವ್ಯವಸ್ಥೆಯನ್ನು ಸರಿಪಡಿಸಿ, ನಿಯಮಿತವಾಗಿ ಕುಡಿಯುವ ನೀರು ಒದಗಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಜನಿಕರ ಸಮಸ್ಯೆಗೆ ಸ್ಪಂದಿಸಿ ಅಗತ್ಯ ಕ್ರಮ ಕೈಗೊಳ್ಳದಿದ್ದಲ್ಲಿ ಮುಂದಿನ ದಿನಗಳಲ್ಲಿ ಹೋರಾಟ ನಡೆಸಬೇಕಾಗುತ್ತದೆ ಎಂದು ಮನವಿಯಲ್ಲಿ ಎಚ್ಚರಿಕೆ ನೀಡಲಾಗಿದೆ.

# ಜಾಲಹಳ್ಳಿಯಲ್ಲಿ ಶ್ರೀ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಜಯಂತೋತ್ಸವ: ಅದ್ದೂರಿ ಬುತ್ತಿ ಜಾತ್ರೆ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ಶ್ರಾವಣ ಮಾಸದ ಅಂಗವಾಗಿ ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಪಟ್ಟಣದ ಶ್ರೀ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಮಹಾಸಂಸ್ಥಾನ ಬೃಹನ್ಮಠದಲ್ಲಿ ಬುಧವಾರ ಶ್ರೀ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಜಯಂತೋತ್ಸವ ಹಾಗೂ ಬುತ್ತಿ ಜಾತ್ರೆ ಅದ್ದೂರಿಯಾಗಿ ಜರುಗಿತು.

ಸಂಜೆ 4 ಗಂಟೆಗೆ ಶ್ರೀ ಈಶ್ವರ ದೇವಾಲಯದಿಂದ ಬೃಹನ್ಮಠದವರೆಗೆ ಸಕಲ ವಾದ್ಯ ವೈಭವಗಳೊಂದಿಗೆ ಬುತ್ತಿ ಜಾತ್ರೆಯ ಮೆರವಣಿಗೆ ನಡೆಯಿತು. ಮೆರವಣಿಗೆಯಲ್ಲಿ ನೂರಾರು ಮಹಿಳೆಯರು ಸೇರಿದಂತೆ ಸಾವಿರಾರು ಭಕ್ತರು ಪಾಲ್ಗೊಂಡಿದ್ದು ವಿಶೇಷವಾಗಿತ್ತು.

ನಂತರ ಬೃಹನ್ಮಠದ ಆವರಣದಲ್ಲಿ ಸಂಜೆ 6 ಗಂಟೆಗೆ ಧರ್ಮಸಭೆ ನಡೆಯಿತು. ಪ್ರವಚನಕಾರರಾದ ಡಾ. ಶಿವಲಿಂಗಯ್ಯ ಶರಣ-ರು, ಪುರಾಣಿಕಮಠ ಅವರು ಪ್ರವಚನ ನೀಡಿ, ಶರಣರು ಹಾಗೂ ಸಂತರು ತೋರಿದ ಸನ್ಮಾರ್ಗದಲ್ಲಿ ಜನರು ನಡೆಯಬೇಕು. ಶರಣ-ರ ವಚನ ಹಾಗೂ ಪ್ರವಚನಗಳನ್ನು ಆಲಿಸುವ ಮೂಲಕ ಜೀವನದಲ್ಲಿ ಶರಣರ ತತ್ವಗಳನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.



### ಬುತ್ತಿ ಜಾತ್ರೆ ಆಯೋಜನೆ ಶ್ಲಾಘನೀಯ: ವೀರಣ್ಣ ಬಾಳಿ ಸಾಹುಕಾರ

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಮಾತನಾಡಿದ ಜಾಲಹಳ್ಳಿ ಮುಖಂಡ ವೀರಣ್ಣ ಬಳೆ ಸಾಹುಕಾರ ಅವರು, ಜಾಲಹಳ್ಳಿಯ ಶ್ರೀ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಮಠದಲ್ಲಿ ಪ್ರತಿವರ್ಷ ಶ್ರಾವಣ ಮಾಸದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರಲಾಗುತ್ತಿದೆ. ಈ ಬಾರಿ ಬುತ್ತಿ ಜಾತ್ರೆಯನ್ನು ಅತ್ಯಂತ ವಿಜೃಂಭಣೆಯಿಂದ ಆಯೋಜಿಸಿರುವುದು ಶ್ಲಾಘನೀಯ ಎಂದು ಹೇಳಿದರು.

### ಶರಣರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ: ಶ್ರೀಗಳು

ಕಾರ್ಯಕ್ರಮದ ಮಹಾಸನ್ನಿಧಾನ ವಹಿಸಿದ್ದ ಪರಮಪೂಜ್ಯ ಶ್ರೀ ಷ॥ ಬ್ರ॥ ವಿದ್ಯಾಮಾನ್ಯ ಶಿವಾಭಿನವ ಜಯಶಾಂತೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಮಹಾಸಂಸ್ಥಾನ ಬೃಹನ್ಮಠ ಜಾಲಹಳ್ಳಿ, ಆಶೀರ್ವಚನ ನೀಡಿ, ಪ್ರತಿವರ್ಷದಂತೆ ಈ ವರ್ಷವೂ ಶ್ರಾವಣ ಮಾಸದ ವಿವಿಧ ಕಾರ್ಯಕ್ರಮಗಳಲ್ಲಿ ಅಪಾರ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿರುವುದು ಸಂತಸದ ಸಂಗತಿ. ಭಕ್ತರು ಶರಣರ ಪ್ರವಚನಗಳನ್ನು ಆಲಿಸಿ ಮನಸ್ಸಿನ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು. ಶರಣರ ವಚನ ಹಾಗೂ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹಿತನುಡಿದರು.

# ದಲಿತರ ಮೇಲಿನ ಅತ್ಯಾಚಾರ, ಕೊಲೆ ಪ್ರಕರಣಗಳು ಸಿಐಡಿ ತನಿಖೆಗೆ ನೀಡಲು ಹೆಚ್.ಶರ್ಫುದ್ದೀನ್ ಆಗ್ರಹ

❑ ನೈಜ್ಯ ದೆಸೆ ನ್ಯೂಸ್

ಮಾನ್ವಿ.: ಜಿಲ್ಲೆಯಲ್ಲಿ ನಡೆದ ಸರಣಿ ದಲಿತರ ಅತ್ಯಾಚಾರ, ಕೊಲೆ ಘಟನೆಗಳನ್ನು ಸಿ.ಐ.ಡಿ. ತನಿಖೆಗೆ ಒಪ್ಪಿಸಿ ನಿಷ್ಪಕ್ಷಪಾತ ತನಿಖೆ ನಡೆಸಿ ಆರೋಪಿಗಳನ್ನು ಕಠಿಣ ಶಿಕ್ಷೆಗೆ ಒಳಪಡಿಸಲು ಮತ್ತು ಜಿಲ್ಲೆಯಲ್ಲಿ ದಲಿತರ ಮೇಲೆ ನಡೆಯುವ ದೌರ್ಜನ್ಯಗಳ ತಡೆಗೆ ಸೂಕ್ತ ಕಾನೂನುಗಳು ಜಾರಿಗೊಳಿಸುವಂತೆ ಸಿ.ಪಿ.ಐ(ಎಂ) ತಾಲೂಕ ಕಾರ್ಯದರ್ಶಿ ಹೆಚ್.ಶರ್ಫುದ್ದೀನ್ ಪೋತ್ನಾಳ ಆಗ್ರಹಿಸಿದರು.

ತಹಸೀಲ್ದಾರ ಮೂಲಕ ಮುಖ್ಯಮಂತ್ರಿಗೆ ನೀಡಿದ ಮನವಿಯಲ್ಲಿ ಮಹಿಳೆಯರ ಮೇಲಾಗುತ್ತಿರುವ ಹಿಂಸಾಚಾರದ ವಿರುದ್ಧ ಹೋರಾಡಲು ಮತ್ತು ಅಂತಹ ಎಲ್ಲಾ ಪ್ರಕರಣಗಳಲ್ಲಿ ಅಪರಾಧಿಗಳಿಗೆ ಕಠಿಣ ಶಿಕ್ಷೆ ವಿಧಿಸಲು ಆಗ್ರಹಿಸಿ ಸಿಪಿಐ (ಎಂ) ಪಕ್ಷದ ವತಿಯಿಂದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದರು. ರಾಯಚೂರು ಜಿಲ್ಲೆಯಲ್ಲಿ ಕಳೆದ ತಿಂಗಳಲ್ಲಿ ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದಲ್ಲಿ ಕು. ಅಶ್ವಿನಿ ಎಂಬ ಬಾಲಕಿಯ ಹಾಗೂ ಲಿಂಗಸಗೂರು ತಾಲೂಕಿನ ಕರಡಕಲ್ ಗ್ರಾಮದಲ್ಲಿ ರಾಣೆಮ್ಮ ಎಂಬ ಮಹಿಳೆಯ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ ಮತ್ತು ಕೊಲೆ ಘಟನೆಗಳು ಹಾಗೂ ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದ ಭೂಮಾನಂದ ಕೊಲೆ ಸೇರಿದಂತೆ ಮೂರು ದಲಿತರ ಮೇಲಿನ ದೌರ್ಜನ್ಯ, ಅತ್ಯಾಚಾರ, ಕೊಲೆಗಳು ನಡೆದಿವೆ.

ಈ ಘಟನೆಗಳನ್ನು ಭಾರತ ಕಮ್ಯೂನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ಸಿಪಿಐ(ಎಂ) ಮಾನ್ವಿ ತಾಲೂಕ ಸಮಿತಿ ತೀವ್ರವಾಗಿ ಖಂಡಿಸುತ್ತದೆ ಎಂದರು. ಒಂದೇ ತಿಂಗಳಲ್ಲಿ ಪರಿಶಿಷ್ಟರ ಮೇಲೆ ನಡೆದ ದೌರ್ಜನ್ಯ ಹಾಗೂ ಅತ್ಯಾಚಾರ, ಕೊಲೆ ಪ್ರಕರಣಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಸಿ.ಐ.ಡಿ. ತನಿಖೆಗೆ ಒಪ್ಪಿಸಿ ತಪ್ಪಿತಸ್ಥರ ವಿರುದ್ಧ ಕಠಿಣ




ಕ್ರಮ ತೆಗೆದುಕೊಳ್ಳಲು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ಇಲಾಖೆಗೆ ಸೂಚನೆ ನೀಡಬೇಕು. ಈ ರೀತಿ ದಲಿತರ ಮೇಲೆ ಅತ್ಯಾಚಾರ, ಕೊಲೆ ಘಟನೆಗಳು ನಡೆದ ಕೂಡಲೇ ರಾಜ್ಯ ಸರ್ಕಾರದ ಜಿಲ್ಲಾ ಉಸ್ತುವಾರಿ ಸಚಿವರು, ಸಮಾಜ ಕಲ್ಯಾಣ ಇಲಾಖೆ ಸಚಿವರು, ಗೃಹ ಸಚಿವರು ಸಂತ್ರಸ್ತ ಕುಟುಂಬಗಳಿಗೆ ಭೇಟಿ ನೀಡಿ ಸಾಂತ್ವನ ಹೇಳಿ ಧೈರ್ಯ ತುಂಬುವ ಕೆಲಸ ಮಾಡಬೇಕಾಗಿ-ತ್ತು. ದುರಂತವೆಂದರೆ ಈ ಘಟನೆಗಳನ್ನು ಖಂಡಿಸಿ ಜಿಲ್ಲೆಯಾದ್ಯಂತ ದಲಿತ ಮತ್ತು ಇತರ ಪ್ರಗತಿಪರ ಸಂಘಟನೆಗಳು ಹೋರಾಟ ನಡೆಸಿದ ಮೇಲೆ ಇತ್ತೀಚೆಗೆ ಸಂಬಂಧಿಸಿದ ಜಿಲ್ಲಾ ಉಸ್ತುವಾರಿ ಸಚಿವರು, ಸಮಾಜ ಕಲ್ಯಾಣ ಇಲಾಖೆ ಸಚಿವರು ಭೇಟಿ ನೀಡಿರುವುದು ದುರದೃಷ್ಟಕರವಾಗಿದೆ.

ಆದರೆ ಇಂದಿನವರೆಗೂ ರಾಜ್ಯದ ಗೃಹ ಸಚಿವರು ಭೇಟಿ ನೀಡದೇ ಇರುವುದು ಅವ-ರಿಗೆ ಮತ್ತು ರಾಜ್ಯ ಸರ್ಕಾರಕ್ಕೆ ದಲಿತರ ಮೇಲೆ ಇರುವ ಕಾಳಜಿ ಎಂತಹದು ಎಂಬುದನ್ನು ತೋರಿಸುತ್ತದೆ ಎಂದು ಹೆಚ್.ಶರ್ಫುದ್ದೀನ್ ಪೋತ್ನಾಳ ಆಕ್ರೋಶ ವ್ಯಕ್ತಪಡಿಸಿದರು. ತಪ್ಪಿತಸ್ಥರಿಗೆ ಕಾಲಮಿತಿಯ ಶಿಕ್ಷೆಯನ್ನು ಜಾ-ರಿಗೊಳಿಸಲು ದೃಢವಾದ ಪರಿಣಾಮಕಾರಿ ಕಾನೂನು ಹಸ್ತಕ್ಷೇಪವನ್ನು ಪಕ್ಷ ಒತ್ತಾಯಿಸುತ್ತದೆ. ಮಹಿಳೆಯರ ವಿರುದ್ಧದ ಹಿಂಸಾಚಾರವನ್ನು ಹೆಚ್ಚಿಸುವುದಕ್ಕೆ ಕಾರಣವಾಗುವ ಸಾಮಾಜಿ-ಕ, ರಾಜಕೀಯ ಮತ್ತು ಆರ್ಥಿಕ ಅಂಶಗಳನ್ನು ಸಮಗ್ರ ಮತ್ತು ಲಿಂಗ ಸೂಕ್ಷ್ಮ ರೀತಿಯಲ್ಲಿ ಪರಿಹ-ರಿಸಬೇಕು. ಮಹಿಳೆಯರ ವಿರುದ್ಧದ ಅಪರಾಧಗಳಲ್ಲಿ ತೀವ್ರ ಏರಿಕೆಯ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದ ಅವರು ಮಹಿಳೆಯರು ಸಾರ್ವಜನಿಕ ಜೀವನ, ಶಿಕ್ಷಣ ಸಂಸ್ಥೆಗಳು ಮತ್ತು ವೈವಿಧ್ಯಮಯ ಕೆಲಸದ ಕ್ಷೇತ್ರಗಳನ್ನು ಪ್ರವೇಶಿಸುತ್ತಿರುವ ಸಮಯದಲ್ಲಿ ನಡೆಯುತ್ತಿರುವ ದೌರ್ಜನ್ಯಗಳ ಅನಾಗ-ರಿಕತೆಯಿಂದ ಮಹಿಳಾ ಸಮಾಜ ಗಾಬರಿಗೊಂಡಿದೆ.

ಸಮೂಹ ಮಾಧ್ಯಮಗಳಲ್ಲಿ ಮಹಿಳೆಯರನ್ನು ಕಚ್ಚಾ ಸರಕು ಮತ್ತು ಲೈಂಗಿಕ ವಸ್ತುಗಳಾಗಿ ಚಿತ್ರಿಸುವುದು ಅತ್ಯಂತ ಆಕ್ಷೇಪಾರ್ಹ ಮತ್ತು ಮಹಿಳೆಯರನ್ನು ಅವಮಾನಿಸುವುದಲ್ಲದೆ ಲೈಂಗಿಕ ಕಿರುಕುಳ ಮತ್ತು ಮಹಿಳೆಯರ ಮೇಲಿನ ಹಿಂಸೆಯ ಅಪರಾಧವನ್ನು ಕ್ಷುಲ್ಲಕಗೊಳಿಸುವ ವಾತಾವರಣವನ್ನು ಸೃಷ್ಟಿಸುತ್ತದೆ. ಇದನ್ನು ವಿರೋಧಿಸಬೇಕು ಎಂದು ಹೇಳಿದರು. ಲೈಂಗಿಕ ದೌರ್ಜನ್ಯ ಮತ್ತು ಅತ್ಯಾಚಾರ ಪ್ರಕರಣಗಳ ಸಂಖ್ಯೆಯಲ್ಲಿನ ಹೆಚ್ಚಳವು ಮಹಿಳೆಯರ ಸುರಕ್ಷತೆ ಮತ್ತು ಭದ್ರತೆಯನ್ನು ತೀವ್ರವಾಗಿ ಕಾಡುತ್ತಿದೆ. ಅತ್ಯಾಚಾರ ಪ್ರಕರಣಗಳು ಪ್ರತಿ ಗಂಟೆಗೆ ಏಳು ಮಹಿಳೆಯರು, ಮಕ್ಕಳು ಅತ್ಯಾಚಾರಕ್ಕೆ ಬಲಿಯಾಗುತ್ತಿದ್ದಾರೆ. ಬಡ, ಸಾಮಾಜಿಕವಾಗಿ ತುಳಿತಕ್ಕೊಳಗಾದ ವರ್ಗಗಳಿಗೆ ಸೇರಿದವರಾಗಿರುವುದರಿಂದ ಅನೇಕ ಪ್ರಕರಣಗಳು ವರದಿಯಾಗುವುದಿಲ್ಲ. ಅವರಿಗೆ ನ್ಯಾಯ ಸಿಗುವುದಿಲ್ಲ. ನಿರ್ದಿಷ್ಟವಾಗಿ ಬುಡಕಟ್ಟು ಮತ್ತು ದಲಿತ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯಗಳು ಬಹಳ ಕಡಿಮೆ ವರದಿಯಾಗುತ್ತವೆ. ಆಘಾತಕಾರಿ ಸಂಗತಿಯೆಂದರೆ ಮಹಿಳೆಯರ ಮೇಲಿನ ಅಪರಾಧಗಳಲ್ಲಿ ಶಿಕ್ಷೆಯ ಪ್ರಮಾಣ ಕೇವಲ ಶೇ.26 ರಷ್ಟಿದೆ. ಅಂದರೆ ನಾಲ್ಕನೇ ಮೂರರಷ್ಟು ಅಪರಾಧಿಗಳು ಶಿಕ್ಷೆಯಿಲ್ಲದೆ ತಪ್ಪಿಸಿಕೊಳ್ಳುತ್ತಾರೆ ಎಂದು ಹೆಚ್.ಶರ್ಫುದ್ದೀನ್ ಪೋತ್ನಾಳ ತಿಳಿಸಿದರು. ಹೊಕ್ರಾಣಿ ಗ್ರಾಮದ ಕು. ಅಶ್ವಿನಿ, ಕರಡಕಲ್ ಗ್ರಾಮದ ರಾಣೆಮ್ಮ ಮಹಿಳೆಯ ಮೇಲೆ ನಡೆದ ಅತ್ಯಾಚಾರ-ಕೊಲೆ ಘಟನೆಗಳು ಮತ್ತು ಹದ್ದಿನಾಳ ಗ್ರಾಮದ ಭೂಮನಂದ ಕೊಲೆ ಘಟನೆಯನ್ನು ಸಿ.ಐ.ಡಿ ತನಿಖೆಗೆ ಒಪ್ಪಿಸಿ ಆರೋಪಿಗಳನ್ನು ಕಠಿಣ ಶಿಕ್ಷೆಗೆ ಒಳಪಡಿಸಬೇಕು. ಸಂತ್ರಸ್ತ ಕುಟುಂಬಕ್ಕೆ ತಲಾ ಒಂದು ಕೋಟಿ ರೂಪಾಯಿ ಪರಿಹಾರ ನೀಡಬೇಕು, ಜೊತೆಗೆ ಕುಟುಂಬದ ಒಬ್ಬರಿಗೆ ಸರ್ಕಾರಿ ಉದ್ಯೋಗ ನೀಡುವ ಭರವಸೆಯನ್ನು ಕೂಡಲೇ ಜಾರಿಗೊಳಿಸಬೇಕು ಹಾಗೂ ಪ್ರತಿ ಕುಟುಂಬಕ್ಕೆ 5 ಎಕರೆ ಜಮೀನು ಮಂಜೂರು ಮಾಡಬೇಕು. ಪ್ರತಿ ತಿಂಗಳು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ನಡೆಸುವ ದಲಿತರ ಕುಂದುಕೊರತೆಗಳ ಸಭೆಗಳನ್ನು ಪ್ರತಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆಸಲು ಕ್ರಮವಹಿಸಬೇಕು. ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಅಕ್ರಮವಾಗಿ ಕಾನೂನುಬಾಹಿರವಾಗಿ ಮದ್ಯ ಮಾರಾಟ ಮಾಡುವವರ ಮೇಲೆ ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳಬೇಕು. ಇಡೀ ಜಿಲ್ಲೆಯನ್ನು ಬಯಲು ಶೌಚಾಲಯ ಮುಕ್ತ ಜಿಲ್ಲೆಯಾಗಿ ಮಾಡಲು ಅಗತ್ಯ ಯೋಜನೆ ರೂಪಿಸಿ ಶೀಘ್ರದಲ್ಲಿ ಜಾ-ರಿಗೊಳಿಸಬೇಕು. ಜಿಲ್ಲೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಬಲಪಡಿಸಲು ಅಗತ್ಯವಿರುವ ಪೊಲೀಸ್ ಸಿಬ್ಬಂದಿಯನ್ನು ನೇಮಕ ಮಾಡಿ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸಬೇಕು ಎಂದು ಹೆಚ್.ಶರ್ಫುದ್ದೀನ್ ಪೋತ್ನಾಳ್ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಿಪಿಐ(ಎಂ) ತಾಲೂಕ ಸಮಿತಿ ಸದಸ್ಯ ಹಾಗೂ ಕಟ್ಟಡ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷರಾದ ರುದ್ರಪ್ಪನಾಯಕ, ಸಿಪಿಐ(ಎಂ) ತಾಲೂಕಾ ಸಮಿತಿ ಸದಸ್ಯರಾದ ಆಂಜನೇಯ ಕೋಟೆ, ವೆಂಕಟೇಶ್ವರ, ಶಾಂತಕುಮಾರ, ಶ್ರೀನಿವಾಸ ಟೈಲ್ಸ್, ಎಂ.ಡಿ.ಇಮಾಮ್, ಎಸ್.ರಾಮಣ್ಣ ಎಸ್ , ರಹೆಮಾನ್, ಹನುಮಂತ, ದುರುಗಪ್ಪ ಪ್ಲಂಬರ್, ಅಯ್ಯಣ್ಣ ಪೇಂಟರ್ , ರಫಿ, ಬನ್ನಪ್ಪಗೌಡ, ದೇವಪ್ಪ, ಶಿವಕುಮಾರ, ಬಶೀರ್, ಬಸವರಾಜ, ತಿಮ್ಮಯ್ಯ, ಹನುಮೇಶ, ರಮೇಶ, ಹನುಮಂತ ದುಪ್ಪಣ್ಣ, ಭಾಷಾ, ಮಕ್ಬುಲ್, ಶಬ್ಬೀರ್ ಸೇರಿದಂತೆ ಸಿ.ಪಿ.ಐ(ಎಂ) ಪಕ್ಷದ ಕಾರ್ಯಕರ್ತರು, ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಸಂಘದ ಪದಾಧಿಕಾರಿಗಳು, ಸದಸ್ಯರು ಭಾಗವಹಿಸಿದ್ದರು.

## ನೇಮಕಾತಿ ಪ್ರಕಟಣೆ

**ಕರ್ನಾಟಕ ಸಮಾಜ ಕಲ್ಯಾಣ ಇಲಾಖೆ ನೇಮಕಾತಿ 2026 – 140 ವಸತಿ ಶಾಲೆ ಶಿಕ್ಷಕರ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಆಗಸ್ಟ್ 24, 2026**

ಕರ್ನಾಟಕ ಸಮಾಜ ಕಲ್ಯಾಣ ಇಲಾಖೆ (SWD) ನೇಮಕಾತಿ 2026: ವಸತಿ ಶಾಲೆ ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (KEA) ಆಗಸ್ಟ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 18–ಸೆಪ್ಟೆಂಬರ್–2026 ರೊಳಗೆ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: ce-tonline.karnataka.gov.in

## ಸರ್ವಧರ್ಮ ಸಮನ್ವಯತೆಯ ಪ್ರತೀಕ ಶ್ರೀ ಕ್ಷೇತ್ರ ಧರ್ಮಸ್ಥಳ–ಶ್ರೀ ಬಸವ ಭೂಷಣ ಸ್ವಾಮೀಜಿಗಳು

❑ ನೈಜ್ಯ ದೆಸೆ ನ್ಯೂಸ್



**ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆಯಲ್ಲಿ ಸರ್ವಧರ್ಮದ ಜನಾಂಗದವರು ಪಾಲುಗೊಂಡಿದ್ದನ್ನು ಕಂಡು ಸರ್ವಧರ್ಮ ಸಮನ್ವಯತೆಯ ಪ್ರತೀಕ ಶ್ರೀ ಕ್ಷೇತ್ರ ಧರ್ಮಸ್ಥಳ ಎಂದು ಶ್ರೀ ಗುರು ಬಸವ ಮಠ ಸಿರುಗುಪ್ಪದ ಶ್ರೀ ಬಸವ ಭೂಷಣ ಸ್ವಾಮೀಜಿಗಳು ಹೇಳಿದರು.** ಅವರು ಇಂದು ಸಿರುಗುಪ್ಪ ನಗರದ ಶ್ರೀ ನೀಲಕಂಠೇಶ್ವರ ದೇವಸ್ಥಾನದ ಸಮುದಾಯ ಭವನದಲ್ಲಿ ಸಿರುಗುಪ್ಪ ತಾಲೂಕು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ ಸಿ ಟ್ರಸ್ಟ್, ಪ್ರಗತಿ ಬಂದು ಸ್ವಸಹಾಯ ಸಂಘಗಳ ಒಕ್ಕೂಟ ವಿಜಯನಗರ ವಲಯ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ ಸಮಿತಿ ಇವರ ಸಂಯುಕ್ತ ಆಶ್ರಯದಲ್ಲಿ ಸ್ವಾಸ್ಥ್ಯ ಸಮಾಜ ನಿರ್ಮಾಣ ಹಾಗೂ ಗ್ರಾಮ ಸುಭಿಕ್ಷೆಗಾಗಿ ಏರ್ಪಡಿಸಿದ್ದ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು. ದೇವರು ನಮ್ಮಲ್ಲಿಯೇ ಇದ್ದಾನೆ ಆದರೆ ನಾವು ಮರೆತಿದ್ದೇವೆ. ಪೂಜೆಗಳನ್ನು ಮಾಡುವುದರ ಮೂಲಕ ನಮಗೆ ಹತ್ತಿರವಾಗುತ್ತಾನೆ ಎಂದು ಪೂಜ್ಯ ಡಾ. ಡಿ ವೀರೇಂದ್ರ ಹೆಗಡೆಯವರು ಹೇಳಿದ ಹಾಗೆ ಈ ದಿನ ನಮ್ಮ ಸಿರುಗುಪ್ಪ ನಗರದ ಎಲ್ಲಾ ಜನರು ಸೇರಿ ಸಾಮೂಹಿಕ ಸತ್ಯನಾರಾಯಣ ಪೂಜೆಯಲ್ಲಿ ಭಾಗವಹಿಸಿ ಪುನೀತರಾಗಿದ್ದೀರಿ ಈ ರೀತಿಯ ಕಾರ್ಯಕ್ರಮಗಳು ಶ್ರೀ ಕ್ಷೇತ್ರ ಧರ್ಮಸ್ಥಳದಿಂದ ಮಾಡಲು ಮಾತ್ರ ಸಾಧ್ಯ ಎಂದರು.

## ಶ್ರಾವಣ ಮಾಸದ ಪ್ರಯುಕ್ತ ತಿಂಗಳ ಕಾಲ ನಿರಂತರ ಭಜನೆ

❑ ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ಶ್ರಾವಣ ಮಾಸದ ಪ್ರಯುಕ್ತ ಪಟ್ಟಣದ ಶ್ರೀ ಮಲ್ಲಿಕಾರ್ಜುನ ಭಜನಾ ಮಂಡಳಿಯ ವತಿಯಿಂದ ಒಂದು ತಿಂಗಳ ಕಾಲ ಪ್ರತಿದಿನ ಬೆಳಗಿನ ಜಾವ 4ರಿಂದ 6 ಗಂಟೆಯವರೆಗೆ ನಿರಂತರವಾಗಿ ಭಜನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.**



ಭಜನಾ ಮಂಡಳಿಯ ಸದಸ್ಯರು ಪ್ರತಿದಿನ ಪಾದಯಾತ್ರೆಯ ಮೂಲಕ ಗ್ರಾಮದ ವಿವಿಧ ದೇವಾಲಯಗಳಿಗೆ ತೆರಳಿ, ಸರ್ವ ದೇವರಿಗೆ ದೀಪ ಬೆಳಗಿಸಿ ವಿಶೇಷ ಪೂಜೆ ಸಲ್ಲಿಸುತ್ತಿದ್ದಾರೆ. ಬಳಿಕ ಪಾದಯಾತ್ರೆಯ ಮೂಲಕ ಶ್ರೀ ಮಲ್ಲಿಕಾರ್ಜುನ ದೇವಸ್ಥಾನಕ್ಕೆ ಮರಳಿ ಭಜನೆ ಮಾಡುವ ಮೂಲಕ ಕಾರ್ಯಕ್ರಮವನ್ನು ಮುಕ್ತಾಯಗೊಳಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಭಾಗ್ಯದ ಹನುಮಂತ ದೇವರು, ಮದ್ದಾನೇಶ್ವರ ಮಠ, ಗ್ರಾಮ ದೇವತೆ, ಬನ್ನಿಕಟ್ಟಿ ದುರ್ಗಾದೇವಿ, ಮಳೆ ಬಸವೇಶ್ವರ ಸೇರಿದಂತೆ ಗ್ರಾಮದ ವಿವಿಧ ದೇವಾಲಯಗಳಿಗೆ ತೆರಳಿ ದೀಪ ಬೆಳಗಿಸಿ ಭಕ್ತಿಭಾವದಿಂದ ಸೇವೆ ಸಲ್ಲಿಸಲಾಗುತ್ತಿದೆ. ಭಜನಾ ಕಾರ್ಯಕ್ರಮದಲ್ಲಿ ಶಿವಪ್ಪ ಗೆಜ್ಜಲಗಟ್ಟಿ, ಚನ್ನಬಸಪ್ಪ ನಾಯಕವಾಡಿ, ಕರಿಸಿದ್ದಪ್ಪ ಹೊಸಕಲ್, ದೊಡ್ಡಪ್ಪ ಲಿಂಗರೆಡ್ಡಿ, ವೀರೇಶ ಕಂದಗಲ್, ಮಹೇಶ ಮಂಗಳೂರು, ಅಂಬರೀಶ್ ಬಂಡಿ, ಮಲ್ಲಪ್ಪ ಗೆಜ್ಜಲಗಟ್ಟಿ, ಗುಂಡಪ್ಪ ಮಂಗಳೂರು, ಚೆನ್ನಪ್ಪ ಯಲಬುರ್ಗಿ, ಸಂಗಪ್ಪ ಬಳ್ಳೊಡ್ಡಿ, ಮಾಂತೇಶ ನಾಯಕವಾಡಿ, ಅಂಬರೀಶ್ ಗೆಜ್ಜಲಗಟ್ಟಿ, ಅಂಬರೀಶ್ ಆದಪ್ಪ ಮಂಗಳೂರು, ಶರಣಪ್ಪ ಬಿಲ್ಲಾರ್, ವಿಶ್ವನಾಥ್ ಯಲಬುರ್ಗಿ, ಮಂಜುನಾಥ್ ನಾಯಕವಾಡಿ, ಶ್ರೀಶೈಲಪ್ಪ ಬೆದೋಟಗಿ, ಮಲ್ಲಿಕಾರ್ಜುನ ಹೊಸಕಲ್, ಸಿದ್ದಣ್ಣ ಮಾದುನೂರ್, ಸಣ್ಮುಖಪ್ಪ ಕರಡಿ, ಚೆನ್ನಪ್ಪ ಕಂಚಿ ಹಾಗೂ ಶಿವಕುಮಾರ್ ಕಂಚಿ ಸೇರಿದಂತೆ ಭಜನಾ ಮಂಡಳಿಯ ಸದಸ್ಯರು ಪಾಲ್ಗೊಳ್ಳುತ್ತಿದ್ದಾರೆ.

# ಜಾಲಹಳ್ಳಿ ಪಿಡಿಒ, ಕಾರ್ಯದರ್ಶಿ ವರ್ಗಾವಣೆ ಗೊಂದಲಕ್ಕೆ ತೆರೆ

## ನೂತನ ಪಿಡಿಒ, ಕಾರ್ಯದರ್ಶಿ ನಿಯೋಜನೆ : ಜಿಲ್ಲಾಡಳಿತದಿಂದ ಆದೇಶ

❑ ನೈಜ್ಯ ದೆಸೆ ನ್ಯೂಸ್

**ಜಾಲಹಳ್ಳಿ.: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕಳೆದ ಹಲವು ದಿನಗಳಿಂದ ನಡೆಯುತ್ತಿದ್ದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಹಾಗೂ ಕಾರ್ಯದರ್ಶಿ ವರ್ಗಾವಣೆ ಗೊಂದಲಕ್ಕೆ ಜಿಲ್ಲಾಡಳಿತ ಇದೀಗ ತೆರೆ ಎಳೆದಿದೆ. ಜಾಲಹಳ್ಳಿ ಗ್ರಾಮ ಪಂಚಾಯಿತಿಗೆ ನೂತನ ಪಿಡಿಒ ಹಾಗೂ ಕಾರ್ಯದರ್ಶಿಯನ್ನು ನಿಯೋಜನೆ ಮಾಡಿ ಜಿಲ್ಲಾಡಳಿತ ಆದೇಶ ಹೊರಡಿಸಿದೆ.**

ಪಿಡಿಒ ಹಾಗೂ ಕಾರ್ಯದರ್ಶಿ ವರ್ಗಾವಣೆ ವಿಚಾರಕ್ಕೆ ಸಂಬಂಧಿಸಿದಂತೆ ಗ್ರಾಮದಲ್ಲಿ ಪರ ಹಾಗೂ ವಿರೋಧದ ಚಟುವಟಿಕೆಗಳು ನಡೆದಿದ್ದವು. ಹಾಲಿ ಪಿಡಿಒ ಹಾಗೂ ಕಾರ್ಯದರ್ಶಿಯವರನ್ನು ಮುಂದುವರಿಸಬೇಕು ಎಂದು ಒಂದು ಬಣ ಒತ್ತಾಯಿಸುತ್ತಿದ್ದರೆ, ಮತ್ತೊಂದೆಡೆ ಆಡಳಿತಾತ್ಮಕ ಕಾರಣಗಳಿಂದ ವರ್ಗಾವಣೆ ಮಾಡಬೇಕು ಎಂಬ ಒತ್ತಾಯವೂ ಕೇಳಿಬಂದಿತ್ತು.

ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ನೂತನ ಪಿಡಿಒ ಹಾಗೂ ಕಾರ್ಯದರ್ಶಿಯನ್ನು ನಿಯೋಜನೆ ಮಾಡಿರುವುದರಿಂದ ಹಲವು ದಿನಗಳಿಂದ ಉಂಟಾಗಿದ್ದ ಗೊಂದಲಕ್ಕೆ ಅಂತಿಮವಾಗಿ ತೆರೆ ಬಿದ್ದಂತಾಗಿದೆ. ಆದಾಗ್ಯೂ, ಹಾಲಿ ಪಿಡಿಒ ಹಾಗೂ ಕಾರ್ಯದರ್ಶಿಯವರನ್ನು ಮುಂದುವರಿಸುವಂತೆ ಒಂದು ಬಣ ಹೋರಾಟ ಮುಂದುವರಿಸಿರುವುದು ಕುತೂಹಲ ಮೂಡಿಸಿದೆ.

ಈ ಕುರಿತು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಈಶ್ವರ ಕುಮಾರ್ ಕಾಂದೂ ಅವರು 'ನೈಜ ದೆಸೆ' ಕನ್ನಡ ದಿನಪತ್ರಿಕೆ ವರದಿಗಾರರೊಂದಿಗೆ ಮಾತನಾಡಿ, ಜಾಲಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಪಿಡಿಒ ಹಾಗೂ ಕಾರ್ಯದರ್ಶಿಗಳು ಕರ್ತವ್ಯಕ್ಕೆ ಹಾಜರಾಗದೆ ಇರುವ ಕುರಿತು ಉಂಟಾಗಿರುವ ಸಮಸ್ಯೆಯನ್ನು ಪರಿಶೀಲಿಸಲಾಗುವುದು ಎಂದು ತಿಳಿಸಿದ್ದಾರೆ.




### ಜಾಲಹಳ್ಳಿ ಪುರಸಭೆ ಮಾಡುವ ವಿಚಾರ: ನ್ಯಾಯಾಲಯದ ತೀರ್ಪಿನ ಬಳಿಕ ಹೋರಾಟ

**ಜಾಲಹಳ್ಳಿ: ಜಾಲಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಪಟ್ಟಣ ಪಂಚಾಯಿತಿಯನ್ನಾಗಿ ಮಾಡುವ ವಿಚಾರ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿದ್ದು, ನ್ಯಾಯಾಲಯದ ತೀರ್ಪು ಹೊರಬಂದ ಬಳಿಕ ಜಾಲಹಳ್ಳಿಯನ್ನು ಪುರಸಭೆಯನ್ನಾಗಿ ಮಾಡಲು ಹೋರಾಟ ನಡೆಸಲಾಗುವುದು ಎಂದು ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಬುಡ್ಡಪ್ಪ ಕಾವಲಿ ತಿಳಿಸಿದ್ದಾರೆ.**

ಜಾಲಹಳ್ಳಿಯನ್ನು ಪುರಸಭೆಯನ್ನಾಗಿ ಮಾಡುವ ಅಗತ್ಯವಿದ್ದು, ಈ ಕುರಿತು ಗ್ರಾಮದ ಎಲ್ಲರೂ ಒಗ್ಗಟ್ಟಾಗಿ ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸದೆ, ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಹಾಗೂ ನ್ಯಾಯಾಲಯದ ಮೊರೆ ಹೋಗುವ ಅಗತ್ಯವಿದೆ ಎಂದು ಪ್ರಾಥಮಿಕ ಪತ್ತಿನ ಕೃಷಿ ಸಹಕಾರ ಸಂಘದ ಮಾಜಿ ನಿರ್ದೇಶಕ ಮುದುರಂಗಪ್ಪ ವಠಾರ್ ಹೇಳಿದರು.

ಜಾಲಹಳ್ಳಿಯ ಸಮಗ್ರ ಅಭಿವೃದ್ಧಿ ಹಾಗೂ ಪಟ್ಟಣದ ಮೂಲಸೌಕರ್ಯಗಳ ದೃಷ್ಟಿಯಿಂದ ಪುರಸಭೆ ರಚನೆ ಕುರಿತು ಗ್ರಾಮಸ್ಥರು ಒಗ್ಗಟ್ಟಾಗಿ ಹೋರಾಟ ನಡೆಸಬೇಕು ಎಂದು ಅವರು ಒತ್ತಾಯಿಸಿದರು.

## ರಾಯಚೂರಿಗೆ ಏಮ್ಸ್ ಮಂಜೂರು ಮಾಡಿಸಲು ಕೇಂದ್ರದ ಮೇಲೆ ಒತ್ತಡ: ಮಹಿಮಾ ಪಟೇಲ್

# 1582ನೇ ದಿನಕ್ಕೆ ಮುಂದುವರಿದ ಅನಿರ್ದಿಷ್ಟ ಧರಣಿ

❑ ನೈಜ್ಯ ದೆಸೆ ನ್ಯೂಸ್



**ರಾಯಚೂರು: ರಾಯಚೂರು ಜಿಲ್ಲೆಗೆ ಏಮ್ಸ್ ಮಂಜೂರು ಮಾಡುವಂತೆ ಒತ್ತಾಯಿಸಿ ರಾಯಚೂರು ಜಿಲ್ಲಾ ಏಮ್ಸ್ ಹೋರಾಟ ಸಮಿತಿ ನಡೆಸುತ್ತಿರುವ ಅನಿರ್ದಿಷ್ಟ ಧರಣಿ ಸತ್ಯಾಗ್ರಹ 1582ನೇ ದಿನಕ್ಕೆ ಮುಂದುವರಿದಿದೆ. ಗುರುವಾರ ಹೋರಾಟ ವೇದಿಕೆಗೆ ಭೇಟಿ ನೀಡಿದ ಜನತಾದಳ (ಯು) ರಾಜ್ಯ ಅಧ್ಯಕ್ಷರಾದ ಮಹಿಮಾ ಪಟೇಲ್ ಅವರು ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು.**

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಹಿಂದುಳಿದ ರಾಯಚೂರು ಜಿಲ್ಲೆಗೆ ಏಮ್ಸ್ ಮಂಜೂರು ಮಾಡುವಂತೆ ರಾಜ್ಯ ಸರ್ಕಾರ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಿದೆ. ಆದರೂ ಕೇಂದ್ರ ಸರ್ಕಾರ ವಿಳಂಬ ಮಾಡುತ್ತಿರುವುದು ಸರಿಯಲ್ಲ. ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿ ಹಾಗೂ ಜಿಲ್ಲೆಯ ಜನರ ಆರೋಗ್ಯದ ದೃಷ್ಟಿಯಿಂದ ರಾಯಚೂರಿಗೆ ಶೀಘ್ರ ಏಮ್ಸ್ ಮಂಜೂರು ಮಾಡಬೇಕು ಎಂದು ಆಗ್ರಹಿಸಿದರು.

ನಂಜುಂಡಪ್ಪ ವರದಿ ಶಿಫಾರಸಿನಂತೆ ರಾಯಚೂರಿನಲ್ಲಿ ಐಐಟಿ ಸ್ಥಾಪನೆಯಾಗಬೇಕಾಗಿತ್ತು. ಆದರೆ ಅದು ಧಾರವಾಡದಲ್ಲಿ ಸ್ಥಾಪನೆಯಾಗಿದ್ದು ರಾಯಚೂರಿಗೆ ಅನ್ಯಾಯವಾಗಿದೆ. ಇದೀಗ ಏಮ್ಸ್ ವಿಚಾರದಲ್ಲಿಯೂ ವಿಳಂಬ ಮಾಡದೆ ಕೇಂದ್ರ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಲು ಅಗತ್ಯ ಪ್ರಯತ್ನ ಮಾಡಲಾಗುವುದು ಎಂದು ಮಹಿಮಾ ಪಟೇಲ್ ಭರವಸೆ ನೀಡಿದರು.

ಅತಿಥಿಗಳಾಗಿ ವಚನ ಟಿವಿ ಸಂಪಾದಕ ಸಿದ್ದು ಯಾಪಲಪರವಿ ಹಾಗೂ ಸರ್ವೋದಯದ ಮುಖಂಡ ಬಸವಲಿಂಗಪ್ಪ ಮಾತನಾಡಿದರು. ಧರಣಿಯಲ್ಲಿ ಡಾ. ಬಸವರಾಜ್ ಕಳಸ, ಅಶೋಕ್ ಕುಮಾರ್ ಜೈನ್, ಎಸ್. ಹನುಮಂತಪ್ಪ, ಎಸ್. ತಿಮ್ಮಾರೆಡ್ಡಿ, ಜಾನ್ ವೆಸ್ಲಿ, ವೆಂಕಟರೆಡ್ಡಿ ದಿನ್ನಿ, ಡಾ. ಜಗದೀಶ್ ಪೂರತಿಪ್ಲಿ, ಎಸ್. ಮಾರಪ್ಪ ವಕೀಲರು, ಬಸವರಾಜ್ ಭಂಡಾರಿ, ಸಾಧಿಕ್ ಖಾನ್ ಯರಗೇರಾ, ವಿನಯ್ ಕುಮಾರ್ ಚಿತ್ರಗಾರ, ಶ್ರೀನಿವಾಸ್ ಜೋಶಿ, ಬಸವರಾಜ್ ಕುರುಗೋಡ್, ವೇಣು ಜಾಲಿಬೆಂಚಿ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಜಿಲ್ಲಾ ಕಾರಾಗೃಹದಲ್ಲಿ ಆರೋಗ್ಯ ತಪಾಸಣಾ ಶಿಬಿರ

## ಪ್ರತಿಯೊಬ್ಬರ ಆರೋಗ್ಯ ಸುರಕ್ಷತೆಗಾಗಿ ಕಾಳಜಿ ವಹಿಸುವುದು ಎಲ್ಲರ ಜವಾಬ್ದಾರಿ

❑ ನೈಜ್ಯ ದೆಸೆ ನ್ಯೂಸ್




**ಹುಟ್ಟುತ್ತಲೆ ಯಾರು ಅಪರಾಧಿಗಳಾಗುವುದಿಲ್ಲ, ಆದರೆ ಜೀವನದಲ್ಲಿ ಜರಗುವ ಕೆಲವು ಘಟನೆಗಳು ಅಪರಾಧಿಯಾಗಿಸುತ್ತವೆ, ಆದರೆ ಆ ಕ್ಷಣದ ಸಂಯಮ, ಶಾಂತತೆ ಮತ್ತು ಹಿರಿಯರ ಮಾರ್ಗದರ್ಶನದಿಂದ ನಾವು ಸಮಾಜಮುಖಿಯಾಗಿ ಜೀವನ ನಡೇಸಬಹುದಾಗಿದೆ,**

ಈ ದಿಶೆಯಲ್ಲಿ ತಮಗೆ ಕೈಗೊಂಡಿರುವ ಆರೋಗ್ಯ ತಪಾಸಣೆಯನ್ನು ತಾವೆಲ್ಲರೂ ಸದುಪಯೋಗ ಪಡಿಸಿಕೊಳ್ಳಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ನಂದಿತಾ ಎಮ್ ಎನ್ ತಿಳಿಸಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಬಂಧಿಖಾನೆ ಇಲಾಖೆ, ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕಾರಗೃಹ, ರಿಮ್ಸ್, ಸಹಯೋಗದೊಂದಿಗೆ ಹಮ್ಮಿಕೊಂಡ ಬಂಧಿಗಳ ಆರೋಗ್ಯ ತಪಾಸಣಾ ಶಿಬಿರ ದಲ್ಲಿ ಮಾತನಾಡುತ್ತಾ ಇಂದು ರಕ್ತದೊತ್ತಡ, ಸಕ್ಕರೆ ಖಾಯಿಲೆ ಪತ್ತೆಹಚ್ಚುವ, ದಂತ ಸಮಸ್ಯೆಗಳ ಗುರ್ತಿಸುವಿಕೆ, ಕಣ್ಣಿನ ಪರೀಕ್ಷೆ, ಹಾಗೂ ಮಾನಸಿಕ ಆರೋಗ್ಯ ತಪಾಸಣೆ ಹಾಗೂ ಆಪ್ತ ಸಮಾಲೊಚನೆಯ ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕಾರಗೃಹ ಅಧಿಕ್ಷಕರಾದ ಅನಿತಾ ಹಿರೇಮನಿ ಮಾತನಾಡಿ ತಜ್ಞವೈದ್ಯರ ಬಳಿ ತಮಗೆ ಇರುವ ಆರೋಗ್ಯದ ಸಮಸ್ಯೆಗಳನ್ನು ತಿಳಿಸಿ ತಪಾಸಣೆ ಮಾಡಿಸಿಕೊಳ್ಳಿ, ಅಗತ್ಯವಿರುವವರಿಗೆ ಹೆಚ್ಚಿನ ಚಿಕಿತ್ಸೆಯನ್ನು ನಿಯಮಾನುಸಾರ ಹೆಚ್ಚಿನ ಚಿಕಿತ್ಸೆಯನ್ನು ಒದಗಿಸಲಾಗುವುದು ಎಂದು ತಿಳಿಸಿದರು.

ವಿಶ್ವ ಆತ್ಮಹತ್ಯೆ ತಡೆ ದಿನ: ಜೀವನದಲ್ಲಿ ಜರಗುವ ದುಃಖ, ಹತಾಶೆ, ಆವೇಶ, ಕೋಪ, ವ್ಯಸನ, ಮುಂತಾದವುಗಳನ್ನು ಸವಾಧಾನದಿಂದ ಎದುರಿಸಲು ಹಾಗೂ ಈ ಸಂಧರ್ಭಗಳಲ್ಲಿ ಆತ್ಮಹತ್ಯೆ ಯಂತಹ ದುಡಿಕಿನ ನಿರ್ಧಾರಗಳನ್ನು ತೆಗೆದುಕೊಳ್ಳಬಾರದು ಎಂದು ಮಾನೋರೋಗ ತಜ್ಞರಾದ ಡಾ ಮನೋಹರ ಪತ್ತಾರ ತಿಳಿಸಿದರು. ಶಿಬಿರಲ್ಲಿ 200 ಹೆಚ್ಚು ಜನರ ತಪಾಸಣೆ ಮಾಡಲಾಯಿತು. 24 ಕಣ್ಣಿನ ತಪಾಸಣೆ, 32 ದಂತ ತಪಾಸಣೆ, 70 ಮಧುಮೇಹ, ರಕ್ತದೊತ್ತಡ ತಪಾಸಣೆ, 31 ಸಾಮಾನ್ಯ ತಪಾಸಣೆ ಮಾಡಿಸಿಕೊಂಡರು.

ಈ ಸಂಧರ್ಭದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಡಾ ಸತೀಶ್, ದಂತ ಕಾರ್ಯಕ್ರಮ ಅಧಿಕಾರಿ, ಡಾ ಶೀತಲ್, ತಜ್ಞ ವೈದ್ಯರಾದ ಡಾ ಭಾಷಿತ್ ಲತೀಫ್, ಡಾ ನವೀನ್, ಕಾರಗೃಹ ವೈದ್ಯರಾದ ಡಾ ರಾಜ-ಕುಮಾರ್, ದಂತ ತಜ್ಞೆ ಡಾ ಮಂಜುಳಾ, ಜೈಲರ್ ಐ, ಎಸ್ ಹಿರೇಮಠ, ಡಿಹೆಚ್‌ಇಒ ಈಶ್ವರ ಹೆಚ್ ದಾಸಪ್ಪನವರ, ಡಿವೈಡಿಹೆಚ್‌ಇಒ ಬಸಯ್ಯ, ಜಿಲ್ಲಾ ಹಿರಿಯ ಆರೋಗ್ಯ ಮೇಲ್ವಿಚಾರಕ ಪುಂಡಲೀಕ ಗಂಜಿ, ಆರಬಿಎಸ್‌ಕೆಯ ಡಾ ಸುಗೂರಯ್ಯಸ್ವಾಮಿ, ಡಾ ಅಕ್ಬರ್ ಹುಸೇನಿ, ಡಾ ಆರತಿ, ಡಾ ಸಂಧ್ಯಾ, ಎನ್‌ಸಿಡಿಯ ಡಾ ಮೇಘಾ ರೆಡ್ಡಿ, ತಂಬಾಕು ಕಾರ್ಯಕ್ರಮ ಪ್ರಿಯಾಂಕಾ, ಔಷಧಾಧಿಕಾರಿ ಹಾಜಿ ಮಲಂಗ್, ಹಿರಯ ಹೆಚ್‌ಐಒ ಸುರೇಶ್ ಸೇರಿದಂತೆ ಮಾನಸಿಕ ಆರೋಗ್ಯ, ದಂತ ಆರೋಗ್ಯ, ಎನ್‌ಸಿಡಿ ವಿಭಾಗ, ನೇತ್ರ ವಿಭಾಗದ ಸಿಬ್ಬಂದಿಯರು, ಜೈಲು ಸಿಬ್ಬಂದಿಯವರು ಹಾಗೂ ಇತರರು ಉಪಸ್ಥಿತರಿದ್ದರು.

# ಜಾಲಹಳ್ಳಿ PDO ವರ್ಗಾವಣೆ ರದ್ದುಪಡಿಸಲು ಕರವೇ ಮನವಿ

## ಸೆ.19ಕ್ಕೆ ಪ್ರತಿಭಟನೆ ನಡೆಸುವುದಾಗಿ ಕರವೇ ತಾಲೂಕು ಘಟಕದ ಎಚ್ಚರಿಕೆ

❑ ನೈಜ್ಯ ದೆಸೆ ನ್ಯೂಸ್




**ದೇವದುರ್ಗ: ಜಾಲಹಳ್ಳಿ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿ ಡಿ ಓ ) ಶ್ರೀಮತಿ ಲಕ್ಷ್ಮಿ ಅವರನ್ನು ಯಾವುದೇ ಕಾರಣಕ್ಕೂ ವರ್ಗಾವಣೆ ಮಾಡದೆ, ಅದೇ ಪಂಚಾಯಿತಿಯಲ್ಲಿ ಮುಂದುವರಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ (ಕನ್ನಡಿಗರ ಸಂಘಟನೆಗಳ ಒಕ್ಕೂಟ) ತಾಲೂಕು ಘಟಕದ ವತಿಯಿಂದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.**

ತಾಲೂಕು ಪಂಚಾಯಿತಿ ಕಚೇರಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದು ಅವರು ಆಗಮಿಸಿದ್ದ ಸಂದರ್ಭದಲ್ಲಿ ಕರವೇ ಮುಖಂಡರು ಅವರನ್ನು ಭೇಟಿ ಮಾಡಿ, ಜಾಲಹಳ್ಳಿ ಗ್ರಾಮ ಪಂಚಾಯಿತಿಯ ಪಿ ಡಿ ಓ ಶ್ರೀಮತಿ ಲಕ್ಷ್ಮಿ ಅವರನ್ನು ಅದೇ ಪಂಚಾಯಿತಿಯಲ್ಲಿ ಮುಂದುವರಿಸುವಂತೆ ಮನವಿ ಮಾಡಿದರು. ಮನವಿಗೆ ಸ್ಪಂದಿಸಿದ ಸಿಇಒ ಅವರು, ಈ ಕುರಿತು ಶೀಘ್ರವೇ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಜಾಲಹಳ್ಳಿ ದೊಡ್ಡ ಗ್ರಾಮ ಪಂಚಾಯಿತಿಯಾಗಿದ್ದು, ಪ್ರತಿನಿತ್ಯ ಹತ್ತಾರು ಸಾರ್ವಜನಿಕ ಸಮಸ್ಯೆಗಳು ಎದುರಾಗುತ್ತಿವೆ. ಹಾಲಿ ಪಂಚಾಯಿತಿ ಆಡಳಿತದಲ್ಲಿ ವಿವಿಧ ಅಭಿವೃದ್ಧಿ ಹಾಗೂ ಸಾರ್ವಜನಿಕ ಕೆಲಸಗಳು ನಡೆಯುತ್ತಿರುವ ಸಂದರ್ಭದಲ್ಲಿ ಅನುಭವಿ ಅಧಿಕಾರಿಯನ್ನು ವರ್ಗಾವಣೆ ಮಾಡಿರುವುದು ಸೂಕ್ತವಲ್ಲ ಎಂದು ಕರವೇ ಮುಖಂಡರು ಅಭಿಪ್ರಾಯಪಟ್ಟರು. ಇತ್ತೀಚೆಗೆ ಜಾಲಹಳ್ಳಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರು ಸೇರಿದಂತೆ 10 ಸದಸ್ಯರು ಪಿ ಡಿ ಓ ಅವರನ್ನು ವರ್ಗಾವಣೆ ಮಾಡದಂತೆ ಮನವಿ ಸಲ್ಲಿಸಿದ್ದರೂ, ಸೂಕ್ತ ಕಾರಣವಿಲ್ಲದೆ ವರ್ಗಾವಣೆ ಮಾಡಲಾಗಿದೆ ಎಂದು ಕರವೇ ಮುಖಂಡರು ಆರೋಪಿಸಿದರು.

ಆದ್ದರಿಂದ ಪಿ ಡಿ ಓ ಶ್ರೀಮತಿ ಲಕ್ಷ್ಮಿ ಅವರ ವರ್ಗಾವಣೆಯನ್ನು ತಕ್ಷಣ ರದ್ದುಪಡಿಸಿ, ಅವರನ್ನು ಜಾಲಹಳ್ಳಿ ಗ್ರಾಮ ಪಂಚಾಯಿತಿಯಲ್ಲಿಯೇ ಮುಂದುವರಿಸಬೇಕು. ಇಲ್ಲವಾದಲ್ಲಿ ಸೆಪ್ಟೆಂಬರ್ 19, 2026ರಂದು ಜಾಲಹಳ್ಳಿ ಗ್ರಾಮ ಪಂಚಾಯಿತಿ ಕಚೇರಿ ಮುಂಭಾಗ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಕರವೇ ಮುಖಂಡರು ಎಚ್ಚರಿಕೆ ನೀಡಿದರು.

ಮುಖಂಡರು, ಪದಾಧಿಕಾರಿಗಳು ಭಾಗಿ ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಅಧ್ಯಕ್ಷ ನಂದಪ್ಪ ಪಿ. ಮಡ್ಡಿ, ಪ್ರಧಾನ ಕಾರ್ಯದರ್ಶಿ ಗುರುನಾಥ್ ರೆಡ್ಡಿ, ತಾಲೂಕು ಸಂಚಾಲಕ ಭೀಮಣ್ಣ ನಾಯಕ, ವಿಕಲಚೇತನ ಕರವೇ ಜಾಲಹಳ್ಳಿ ಅಧ್ಯಕ್ಷ ಭೀಮರಾಯ ಮಕಾಶಿ, ಬಾಬು ಗೌರಮ ಪೇಟ, ಹುಸೇನ್ ಪಾಶ ಸೇರಿದಂತೆ ಕರವೇ ಪದಾಧಿಕಾರಿಗಳು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಜಾಲಹಳ್ಳಿ ಮುಖಂಡರಾದ ಶ್ರೀಧರ್ ದೇಸಾಯಿ, ಶಂಕರ್‌ಗೌಡ ಮಾಲಿ ಪಾಟೀಲ್, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ವೀರೇಶ್ ಅರಕೇರಿ, ಸದಸ್ಯರಾದ ಅಬ್ದುಲ್ ರಹಮಾನ್ ಖುರೇಶಿ, ಬಸವರಾಜ್ ಗೋಪಾಲಪುರ ಸೇರಿದಂತೆ ಹಲವರು ಭಾಗವಹಿಸಿದ್ದರು.

## ವಚನ ದರ್ಶನ

ನೀರಿಂಗೆ ನೈದಿಲೆಯೆ ಶೃಂಗಾರ ಸಮುದ್ರಕ್ಕೆ ತೆರೆಯೆ ಶೃಂಗಾರ ನಾರಿಗೆ ಗುಣವೆ ಶೃಂಗಾರ ಗಗನಕ್ಕೆ ಚಂದ್ರಮನೆ ಶೃಂಗಾರ ನಮ್ಮ ಕೂಡಲಸಂಗನ ಶರಣರಿಗೆ ನೊಸಲ ವಿಭೂತಿಯೆ ಶೃಂಗಾರ

12ನೇ ಶತಮಾನದ ಸಾಮಾಜಿಕ ಕ್ರಾಂತಿಕಾರಿ, ವಿಶ್ವಗುರು ಶ್ರೀ ಬಸವಣ್ಣನವರು ಬರೆದಿರುವ ಅತ್ಯಂತ ಜನಪ್ರಿಯ ಹಾಗೂ ಮಾರ್ಮಿಕವಾದ ವಚನವಾಗಿದೆ.

ಈ ವಚನದಲ್ಲಿ ಬಸವಣ್ಣನವರು ಪ್ರಕೃತಿಯ ಸಹಜ ನಿಯಮಗಳನ್ನು ಉದಾಹರಿಸುತ್ತಾ, ಮನುಷ್ಯನಿಗೆ ಹಾಗೂ ಭಕ್ತನಿಗೆ ನಿಜವಾದ ಸೌಂದರ್ಯ ಶೃಂಗಾರ ಯಾವುದು ಎಂಬುದನ್ನು ಸುಂದರವಾಗಿ ವಿವರಿಸಿದ್ದಾರೆ.

ನೀರಿಂಗೆ ನೈದಿಲೆಯೆ ಶೃಂಗಾರ: ಕೇವಲ ನೀರು ತುಂಬಿರುವ ಕೆರೆಗಿಂತ, ಅದರಲ್ಲಿ ಅರಳಿ ನಿಂತಿರುವ ನೈದಿಲೆ ಕಮಲ ನೆಲಕಮಲ ಹೂವು ಆ ನೀರಿಗೆ ಅಸಲಿ ಅಂದವನ್ನು ನೀಡುತ್ತದೆ.

ಸಮುದ್ರಕ್ಕೆ ತೆರೆಯೆ ಶೃಂಗಾರ: ಅಲೆಗಳಿಲ್ಲದ ಸಮುದ್ರ ಜೀವಂತಿ-ಕೆಯಿಲ್ಲದಂತೆ ಕಾಣುತ್ತದೆ. ನಿರಂತರವಾಗಿ ಏಳುವ ಮತ್ತು ಬೀಳುವ ಅಲೆಗಳೇ ತೆರೆ ಸಮುದ್ರದ ನಿಜವಾದ ಸೊಬಗು.

ನಾರಿಗೆ ಗುಣವೆ ಶೃಂಗಾರ: ಮಹಿಳೆಗೆ ಕೇವಲ ಒಡವೆ, ವಸ್ತ್ರಗಳು ಸೌಂದರ್ಯ ತರುವುದಿಲ್ಲ. ಆಕೆಯ ಸದ್ಗುಣ, ವಿವೇಕ ಮತ್ತು ನಡತೆಯೇ ಆಕೆಗೆ ಶ್ರೇಷ್ಠ ಆಭರಣ.

ಗಗನಕ್ಕೆ ಚಂದ್ರಮನೆ ಶೃಂಗಾರ: ಕತ್ತಲ ಕರಗಿಸುವ ಮತ್ತು ಆಕಾಶಕ್ಕೆ ತಂಪು ಬೆಳಕನ್ನು ನೀಡುವ ಚಂದ್ರನೇ ವಿಶಾಲವಾದ ಗಗನಕ್ಕೆ ನಿಜವಾದ ಒಡವೆ.

ಕೂಡಲಸಂಗನ ಶರಣರಿಗೆ ನೊಸಲ ವಿಭೂತಿಯೆ ಶೃಂಗಾರ: ಅದೇ ರೀತಿ, ಶಿವನ ಭಕ್ತರಾದ ಶರಣರಿಗೆ ಹಣೆಯ ಮೇಲಿರುವ ವಿಭೂತಿಯೇ ಭಸ್ಮ ಶೃಂಗಾರ. ಇಲ್ಲಿ 'ವಿಭೂತಿ' ಎಂದರೆ ಕೇವಲ ಭಸ್ಮ ಮಾತ್ರವಲ್ಲ; ಅಹಂಕಾರವನ್ನು ಸುಟ್ಟು ಭಸ್ಮ ಮಾಡಿ, ಪವಿತ್ರ ಹಾಗೂ ಶುದ್ಧ ಮನಸ್ಸಿನಿಂದ ಬದುಕುವ ಶರಣರ ಭಕ್ತಿ ಮತ್ತು ಜ್ಞಾನದ ಸಂಕೇತವಾಗಿದೆ. ಶರಣರ ವಚನಗಳು ಮನುಕುಲದ ದಾರಿದೀಪವಾಗಿವೆ. ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

# ತಾಲೂಕ ಪಂಚಾಯತ ಕಚೇರಿ ಆವರಣದಲ್ಲಿ ಪ್ರತಿಭಟನಾ ಧರಣಿ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ಬಂಟನೂರ ಗ್ರಾಮ ಪಂಚಾಯತ ವ್ಯಾಪ್ತಿಗೆ ಬರುವ ಶಳ್ಳಗಿ ಗ್ರಾಮದ ಎಲ್ಲಾ ಅಹರ್ ಕೂಲಿಕಾರರಿಗೆ ವಿಬಿ-ಜಿ-ರಾಮಜಿ ಯೋಜನೆಯ ಜಾಬ್ ಕಾರ್ಡ್ ವಿತರಣೆ,**

ಕೂಲಿಕಾರರಿಗೆ ಉದ್ಯೋಗ ನೀಡದೇ ಇರುವುದು ಹಾಗೂ ಇದಕ್ಕೆ ಸಂಬಂಧಿಸಿದ ಹಲವಾರು ಸಮಸ್ಯೆಗಳ ಪರಿಹಾರಕ್ಕಾಗಿ ಆಗ್ರಹಿಸಿ ಕರ್ನಾಟಕ ಕೃಷಿ ಕೂಲಿಕಾರರ ಮತ್ತು ಗ್ರಾಮೀಣ ಕಾರ್ಮಿಕರ ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳ ನೇತೃತ್ವದಲ್ಲಿ ಕೂಲಿ ಕಾರ್ಮಿಕರು ಗುರುವಾರ ತಾಲೂಕು ಪಂಚಾಯತ್ ಕಾರ್ಯಾಲಯದ ಆವರಣದಲ್ಲಿ ಪ್ರತಿಭಟನಾ ಧರಣಿ ನಡೆಸಿದರು. ಈ ಸಂದರ್ಭದಲ್ಲಿ ಪ್ರತಿಭಟನಾಕಾರರನ್ನು ಉದ್ದೇಶಿಸಿ ಸಂಘದ ಜಿಲ್ಲಾ ಸಂಚಾಲಕ ರಮೇಶ ಸಾಸಬಾಳ ಅವರು ಮಾತನಾಡಿ ಬಂಟನೂರ ಗ್ರಾಮ ಪಂಚಾಯತ್ ವ್ಯಾಪ್ತಿಯ ಶಳ್ಳಗಿ ಗ್ರಾಮದ ಕೂಲಿ ಕಾರ್ಮಿಕರು ಜಾಬ್ ಕಾರ್ಡ್ ಪಡೆಯಲು ಎಲ್ಲಾ ರೀತಿಯಿಂದಲೂ ಅರ್ಹ ರಾಗಿದ್ದರೂ



ಅವರಿಗೆ ಜಾಬ್ ಕಾರ್ಡ್ ವಿತಿರಿಸಿಲ್ಲ ಮತ್ತು ಅವರಿಗೆ ಉದ್ಯೋಗವನ್ನೂ ನೀಡಿದೇ ಅನ್ಯಾಯ ಮಾಡಲಾಗಿದೆ ಮತ್ತು ಇದರ ಕುರಿತು ಮಾಹಿತಿ ಕೇಳಲು ತಾಪಂ ಕಾರ್ಯಕ್ಕೆ ಬಂದ ಕೂಲಿಕಾರ ಮಹಿಳೆಯೊಂದಿಗೆ ಕಚೇರಿ ಸಿಬ್ಬಂದಿ ಸರಿಯಾಗಿ ವರ್ತಿಸಿಲ್ಲ ಇದನ್ನು ಸರಿಪಡಿಸುವವರೆಗೂ ನಾವು ಪ್ರತಿಭಟನೆ ನಿಲ್ಲಿಸುವುದಿಲ್ಲ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರತಿಭಟನಾಕಾರರನ್ನು ಸಮಾಧಾನಪಡಿಸಲು ತಾಪಂ ಇಓ ಅನಸೂಯಾ ಚಲವಾದಿ ಅವರು ಸಾಕಷ್ಟು ಪ್ರಯತ್ನಿಸಿದರಾದರೂ ಪ್ರತಿಭಟನಾಕಾರರು ಮೌಖಿಕ ಹೇಳಿಕೆಯನ್ನು ಒಪ್ಪದೆ ಲಿಖಿತ ರೂಪದಲ್ಲಿ ನೀಡಬೇಕೆಂದು ಆಗ್ರಹಿಸಿದರು. ಈ ಮಧ್ಯೆ ಪ್ರತಿಭಟನಾಕಾರರು ಹಾಗೂ ಅಧಿಕಾರಿಗಳ ಮಧ್ಯೆ ಸಾಕಷ್ಟು ಮಾತುಕತೆಗಳು ನಡೆದವು. ಅಂತಿಮವಾಗಿ ಅಧಿಕಾರಿಗಳು ಇಲಾಖೆಯು ಸದರಿ ಯೋಜನೆಗೆ ಸೂಚಿಸಿದ ಮಾರ್ಗಸೂಚಿಯ ವ್ಯಾಪ್ತಿಗೆ ಬರುವ ಬೇಡಿಕೆಗಳೆಲ್ಲವನ್ನೂ 10 ದಿನಗಳ ಒಳಗಾಗಿ ಈಡೇರಿಸುವುದಾಗಿ ಲಿಖಿತ ರೂಪದ ಪತ್ರವನ್ನು ನೀಡಿದ ನಂತರ ಪ್ರತಿಭಟನಾಕಾರರು ತಮ್ಮ ಪ್ರತಿಭಟನೆಯನ್ನು ಹಿಂದಕ್ಕೆ ಪಡೆದುಕೊಂಡರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಅನಸೂಯಾ ಚಲವಾದಿ, ಸಹಾಯಕ ನಿರ್ದೇಶಕ ಪಿ.ಎಸ್.ಕಸನಕ್ಕಿ, ಬಂಟನೂರ ಗ್ರಾಮ ಪಂಚಾಯತಿ ಪಿಡಿಓ ಆಯ್.ಡಿ.ಬಡಿಗೇರ, ಕರ್ನಾಟಕ ಕೃಷಿ ಕೂಲಿಕಾರರ ಮತ್ತು ಗ್ರಾಮೀಣ ಕಾರ್ಮಿಕರ ಸಂಘದ ರಾಜ್ಯ ಜಂಟಿ ಕಾರ್ಯದರ್ಶಿ ದಾವಲಸಾಬ ನದಾಫ, ರಾಜ್ಯ ಸಮಿತಿ ಸದಸ್ಯ ಹುಲಗಪ್ಪ ಚಲವಾದಿ, ಮಹಿಳಾ ಸದಸ್ಯೆಯರಾದ ಸಂಗಮ ಕಟ್ಟಿಮನಿ ಶ್ರೀದೇವಿ ದನ್ನೂರ, ಲಕ್ಷ್ಮಿ ಕೋರಿ, ಲಕ್ಷ್ಮಿ ನಗನೂರ, ಶಿವುಬಾಯಿ ಅಂಬಳನೂರ, ಗೀತಾ, ಅನ್ನಪೂರ್ಣ ಪೂಜಾರಿ ಹಾಗೂ ನೂರಾರು ಕೂಲಿ ಕಾರ್ಮಿಕರು ಭಾಗವಹಿಸಿದ್ದರು. ಸೂಕ್ತ ಪೊಲೀಸ್ ಬಂದೋಬಸ್ತಿ: ಪ್ರತಿಭಟನೆ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ನೋಡಿಕೊಂಡು ಶಾಂತಿ ಸುವ್ಯವಸ್ಥೆ ಕಾಪಾಡುವಂತಾಗಲು ಸ್ಥಳೀಯ ಪಿಎಸ್ಐ ಜ್ಯೋತಿ ಕೋತ ಅವರು ಸೂಕ್ತ ಪೊಲೀಸ್ ಬಂದೋಬಸ್ತಿ ವದಗಿಸಿದ್ದರು.

# ವಚನ ಸಾಹಿತ್ಯಕ್ಕೆ ತತ್ವಪದಕಾರರ ಕೊಡುಗೆ ಅಪಾರ: ಶರಣ ಬೋರಗಿ



❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ನಾನು ಎಂಬ ಅಹಂಭಾವ ಬಿಟ್ಟುಕೊಟ್ಟು ಕಾಯಾವಾಚಾಮನಸಾ ಸೋಹಂ ಎಂದು ನಡೆಯುತ್ತ ದಾಸೋಹಂ ಎಂದು ಬದುಕು ಸಾಗಿಸಿದವರು ಶರಣ-ರು, ಎಂದು ಕು.ಸಿರಸಗಿ-ವಸ್ತಾರಿಯ ಸದ್ಗುರು ಭೀಮಾಶಂಕರ ಬ್ರಹ್ಮವಿದ್ಯಾಶ್ರಮದ ಶರಣ ಬಸವರಾಜ ಬೋರಗಿ ಹೇಳಿದರು.** ಔ

ಅವರು ಪಟ್ಟಣದ ಕಾಳಿಕಾ ಮಂದಿರದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕ, ಯುವ ಘಟಕ ಹಾಗೂ ಕದಳಿ ವೇದಿಕೆ ವತಿಯಿಂದ ಶ್ರಾವಣ ಮಾಸದ ಪ್ರಯುಕ್ತ ನಡೆದ ವಚನ ಶ್ರಾವಣ ನಾಲ್ಕನೆಯ ವಾರದ ಕಾರ್ಯಕ್ರಮದಲ್ಲಿ " ತತ್ವ ಪದಗಳಲ್ಲಿ ಶರಣ ಚಿಂತನೆ" ಎಂಬ ವಿಷಯದ ಕುರಿತು ಸೋಮವಾರ ಸಂಜೆ ಮಾತನಾಡಿದರು. 12ನೆಯ ಶತಮಾನದ ಶಿವಶರಣರ ವಚನದ ಸಾರ ಹಾಗೂ ಸಿದ್ಧಾಂತಗಳನ್ನು ಸರಳ ಜನಪದ ರೂಪದಲ್ಲಿ ಸಾಮಾನ್ಯ ಜನ-ರಿಗೆ ತಲುಪಿಸಿದ ಕೀರ್ತಿ ತತ್ವ ಪದಕಾರರದು. ವಚನಗಳಿಗೆ ತತ್ವ ಪದಕಾರರು ತತ್ವಗಳನ್ನು ಜನಪದ ರಾಗಗಳಿಗೆ ಅಳವಡಿಸಿ ಹಾಡಿದರು ಅದನ್ನು ಕಟ್ಟಕಡೆಯ ಮನುಷ್ಯನಿಗೂ ತಲುಪಿಸುವಲ್ಲಿ ಕೆಲಸ ಮಾಡಿದ್ದಾರೆ. ತತ್ವ ಪದಕಾರರಾದ ಕಡಕೋಳ ಮಡಿವಾಳಪ್ಪ, ಬೋರಗಿ ಭೀಮಾಶಂಕರ, ತಿಳಗೂಳದ ಯಮನೂರೇಶ ಶರಣರು, ಖೈನೂರು ಕೃಷ್ಣಪ್ಪ, ಚನ್ನೂರ ಜಲಾಲಸಾಬ ಮೊದಲಾದವರು ಇದ್ದಾರೆ ಎಂದರು.

ಅಧ್ಯಕ್ಷತೆಯನ್ನು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕದ ಅಧ್ಯಕ್ಷ ಡಾ.ವಿ.ಎಸ್.ಕಾರ್ಚಿ ವಹಿಸಿದ್ದರು. ವೇದಿಕೆಯಲ್ಲಿ ಗಣ್ಯ ವರ್ತಕ ಪ್ರಭುಗೌಡ ಮದರಕಲ್ಲ, ಮಲ್ಲಪ್ಪ ಹಡಪದ, ಶರಣಪ್ಪ ಕಾಚಾಪುರ ವೇದಿಕೆಯಲ್ಲಿದ್ದರು. ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಶಿಕ್ಷಕ ಲಿಂಗದಳ್ಳಿ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕ ಅಪ್ಪಾಸಾಹೇಗೌಡ ಮೂಲಿಮನಿ, ಶ್ರೀನಿವಾಸ ಸೋನಾರ, ದಾಸೋಹಿ ಬಸವರಾಜ ಕುಂಬಾರ, ಸೇರಿದಂತೆ ಹಲವರನ್ನು ಸನ್ಮಾನಿಸಲಾಯಿತು. ಶರಣ ಸಾಹಿತ್ಯ ಪರಿಷತ್ತಿಗೆ ದತ್ತಿಗಳನ್ನು ಹೆಚ್ಚಿಸಲು ನೆರವಾಗುವಂತೆ ಕೋರಲಾಯಿತು. ಪರಿಷತ್ತು ಹಾಗೂ ಕದಳಿ ವೇದಿಕೆ ಪದಾಧಿಕಾರಿಗಳು ಮತ್ತು ಬಸವಾಭಿಮಾನಿಗಳು ಉಪಸ್ಥಿತರಿದ್ದರು. ಮನಸ್ವಿ ಬಿರಾದಾರ ವಚನ ನೃತ್ಯ ಪ್ರದರ್ಶಿಸಿದರು. ಬಾಲಕಿ ಪ್ರಣವಿ ಸಜ್ಜನ ಪ್ರಾರ್ಥಿಸಿದರು. ಸಿದ್ಧನಗೌಡ ಚೌದ್ರಿ ನಿರ್ವಹಿಸಿದರು. ಸಾಹೇಬಗೌಡ ಬಿರಾದಾರ ಸ್ವಾಗತಿಸಿದರು. ಸಿದ್ದು ಕರಡಿ ವಂದಿಸಿದರು.

## ಜಿಲ್ಲಾ ಉತ್ತಮ ಶಿಕ್ಷಕ ಪುರಸ್ಕೃತ ಮೂಲಿಮನಿ ಇವರಿಗೆ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ತಾಲೂಕಿನ ಲಿಂಗದಳ್ಳಿ ಸರಕಾರಿ ಪ್ರೌಢಶಾಲೆಯಲ್ಲಿ ಶಿಕ್ಷಕರಾಗಿ ಸೇವೆಯನ್ನು ಸಲ್ಲಿಸುತ್ತಿರುವ ಅಪ್ಪಾ ಸಾಹೇಬಗೌಡ ಮೂಲಿಮನಿ ಇವರಿಗೆ ವಿಜಯಪುರ ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಮಾಡಿರುವುದರ ಹಿನ್ನೆಲೆಯಲ್ಲಿ ಅವರನ್ನು ಇತ್ತೀಚಿಗೆ ಪಟ್ಟಣದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತ ತಾಲೂಕ ಘಟಕ,**



ಯುವ ಘಟಕ ಹಾಗೂ ಕದಳಿ ವೇದಿಕೆ ವತಿಯಿಂದ ಹಮ್ಮಿಕೊಂಡ ವಚನ ಶ್ರಾವಣ ಕಾರ್ಯಕ್ರಮದಲ್ಲಿ ಗೌರವ ಸಮರ್ಪಣೆ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಶ್ರೀ ಸದ್ಗುರು ಭೀಮಾಶಂಕರ ಬ್ರಹ್ಮ ವಿದ್ಯಾಶ್ರಮದ ಶರಣ ಬಸವರಾಜ ಬೋರಗಿ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕದ ಅಧ್ಯಕ್ಷ ಡಾ.ವಿ.ಎಸ್.ಕಾರ್ಚಿ, ಕದಡಿ ವೇದಿಕೆ ಅಧ್ಯಕ್ಷೆ ಉಮಾ ಬಸವರಾಜ ಸಾಲಂಕಿ, ಗಂಗಾಧರ ಕಸ್ತೂರಿ,ಯುವ ಘಟಕದ ಅಧ್ಯಕ್ಷ ಕಾಶಿನಾಥ್ ಸಜ್ಜನ, ಪ್ರಭುಗೌಡ ಮದರಕಲ್ಲ, ಮಲ್ಲಪ್ಪ ಹಡಪದ, ಶರಣಪ್ಪ ಕಾಚಾಪುರ, ಶ್ರೀನಿವಾಸ ಸೋನಾರ, ಬಸವರಾಜ ಕುಂಬಾರ,ಸಿದ್ಧನಗೌಡ ಚೌದ್ರಿ, ಸಾಹೇಬಗೌಡ ಬಿರಾದಾರ,ಸಿದ್ದು ಕರಡಿ, ಅಶೋಕ ಚಿನಗುಡಿ ಮತ್ತಿತರರು ಇದ್ದರು.

# ಗಂಗಾಮತ ಸಮುದಾಯದ ಸಮಗ್ರ ಅಭಿವೃದ್ಧಿಗೆ ಅಗತ್ಯವಾದ ಸಹಕಾರ ನೀಡುತ್ತೇನೆ: ಜೆ.ಎನ್.ಗಣೇಶ್

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ/ಕಂಪ್ಲಿ: ತಾಲ್ಲೂಕಿನಲ್ಲಿ ಗಂಗಾಮತ ಸಮುದಾಯದ ಸಮಗ್ರವಾದ ಅಭಿವೃದ್ಧಿಗೆ ಅಗತ್ಯವಾದ ಸಹಕಾರ ನೀಡುವುದಾಗಿ ಶಾಸಕ ಜೆ.ಎನ್.ಗಣೇಶ್ ತಿಳಿಸಿದರು. ಅವರು ಪಟ್ಟಣದ ಗಂಗಾಮತಸ್ಥರ ಸಮುದಾಯ ಹಮ್ಮಿಕೊಂಡಿದ್ದ ಜಾಗೃತಿ ಯಾರ್ಲಿ,ಗಂಗಾಮತ ಕಲ್ಯಾಣ ಮಂಟಪಕ್ಕೆ ಭೂಮಿ ಪೂಜೆ ಹಾಗೂ ಧಾರ್ಮಿಕ ಸಮಾವೇಶಕ್ಕೆ ಚಾಲನೆ ನೀಡಿ ಮಾತನಾಡಿದರು.**

ಸಮುದಾಯದ ಕಲ್ಯಾಣ ಮಂಟಪ ನಿರ್ಮಾಣಕ್ಕೆ ಸದ್ಯ 1 ಕೋಟಿ ರೂ ಅನುದಾನ ನೀಡಿದ್ದು, ಅಗತ್ಯವಿದ್ದಲ್ಲಿ ಇನ್ನು ಹೆಚ್ಚಿನ ಅನುದಾನ ಒದಗಿಸುವುದಾಗಿ ಭರವಸೆಯನ್ನು ನೀಡಿದರು. ತಾಲ್ಲೂಕಿನ ಎಮ್ಮಿಗನೂರು ಗ್ರಾಮದಲ್ಲಿ ಗಂಗಾಮತ ಸಮುದಾಯ ಭವನಕ್ಕೆ 1 ಕೋಟಿ ರೂ ಅನುದಾನ, ಅಂಬಿಗರ ಚೌಡಯ್ಯ ವೃತ್ತ ನಿರ್ಮಾಣಕ್ಕೆ,ಅಂಬಿಗರ ಚೌಡಯ್ಯನವರ ಪುತ್ತಳಿ ಸ್ಥಾಪನೆಗೆ ತಲಾ 50 ಲಕ್ಷರೂಗಳ ಅನುದಾನ



ಒದಗಿಸುವುದಾಗಿ ಭರವಸೆಯನ್ನು ನೀಡಿದರು. ಪುರಸಭೆ ಮಾಜಿ ಅಧ್ಯಕ್ಷ ಬಿ.ಸಿದ್ದಪ್ಪ, ಸಮಾಜದ ಮುಖಂಡರಾದ ಕೆ.ಮನೋಹರ್ ಮಾತನಾಡಿ ಮುಂಬರುವ ಚುನಾವಣೆಗಳಲ್ಲಿ ಗಂಗಾಮತಸ್ಥ-ರಿಗೆ ಹೆಚ್ಚಿನ ರಾಜಕೀಯ ಸ್ಥಾನಮಾನ ನೀಡಬೇಕು. ಗಂಗಾಮತಸ್ಥರನ್ನು ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆ ಮಾಡಲು ಕೇಂದ್ರವನ್ನು ಒತ್ತಾಯಿಸಬೇಕು. ಪಟ್ಟಣದಲ್ಲಿ ನಿರ್ಮಿಸಲಿರುವ ಕಲ್ಯಾಣ ಮಂಟಪಕ್ಕೆ ಸುಮಾರು 4 ಕೋಟಿ ರೂಗಳ ಕ್ರಿಯಾ ಯೋಜನೆಯನ್ನು ತಯಾರಿಸಲಾಗಿದ್ದು, ಇನ್ನು ಹೆಚ್ಚಿನ ಅನುದಾನವನ್ನು ನೀಡಬೇಕೆಂದು ಮನವಿ ಮಾಡಿದರು. ಇದಕ್ಕು ಮುನ್ನ ಕಂಪ್ಲಿ ಕೋಟೆಯ ತುಂಗಭದ್ರಾ ನದಿಯಲ್ಲಿ ಗಂಗಾ ಪೂಜೆಯನ್ನು ನೆರವೇ-ರಿಸಿದ ನಂತರ ಸಮುದಾಯದ ಮಹಿಳೆಯರು ಪೂರ್ಣಕುಂಭ, ಕಳಸ ಕನ್ನಡಿಗಳೊಂದಿಗೆ ಪಟ್ಟಣದಲ್ಲಿ ಬೃಹತ್ ಮೆರವಣಿಗೆ ನಡೆಸಿ ಸಮುದಾಯ ಭವನ ನಿರ್ಮಾಣ ಸ್ಥಳಕ್ಕೆ ಆಗಮಿಸಿದರೆ, ಸಮುದಾಯದ ಪುರುಷರು,ಯುವಕರು ನೂರಾರು ಮೋಟಾರು ಸೈಕಲ್ ಯಾರ್ಲಿ ಮೂಲಕ ಜಯಘೋಷಗಳನ್ನು ಮೊಳಗಿಸುತ್ತಾ ಆಗಮಿಸಿದರು.

ಗಂಗಾಮತಸ್ಥರ ಸಂಘದ ತಾಲ್ಲೂಕು ಅಧ್ಯಕ್ಷ ಎಲಿಗಾರ ನಾಗರಾಜ ಅಧ್ಯಕ್ಷತೆ ವಹಿಸಿದ್ದರಲು. ಮುಖಂಡರಾದ ಕನಕಪ್ಪ ಸುಣಗಾರ, ನಾಗರಾಜ, ನೇಣಕಿ ಗಿರೀಶ್, ಆಯ್ಯೋದಿ ವೆಂಕಟೇಶ್, ಬಿ.ರಮೇಶ್, ಕೆ.ಪ್ರಕಾಶ್, ನಡವಿ ಮಲ್ಲಿಕಾರ್ಜುನ, ಬಿ.ಈರಪ್ಪ, ಜೆ.ಯಲ್ಲಪ್ಪ, ಕಟ್ಟೆ ವೆಂಕಟೇಶ್, ಕಾಗಿ ಈರಣ್ಣ, ಇಟಗಿ ಫಕ್ಕೀರಪ್ಪ, ಬಸವರಾಜ, ವೈ.ಲೋಕೇಶ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ತಾಲ್ಲೂಕು ಅಧ್ಯಕ್ಷ ಕೆ.ಶ್ರೀನಿವಾಸರಾವ್, ಎಪಿಎಂಸಿ ಅಧ್ಯಕ್ಷ ಎನ್.ಹಬೀಬ್ ರೆಹಮಾನ್, ಪುರಸಭೆ ಮಾಜಿ ಅಧ್ಯಕ್ಷ ಬಟ್ಟ ಪ್ರಸಾದ್, ಪುರಸಭೆ ಮಾಜಿ ಸದಸ್ಯ ಕೆ.ಎಸ್.ಚಾಂದ್ ಬಾಷಾ, ಕುರಗೋಡು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚನ್ನಬಸವನಗೌಡ ಸೇರಿದಂತೆ ಅನೇಕರು ಭಾಗವಹಿಸಿದ್ದರು.

**ವರದಿ: ಜಿಲಾನಸಾಬ್ ಬಡಿಗೇರ್**

# ವಿದ್ಯಾರ್ಥಿಗಳು ಸಹಕಾರ ಕ್ಷೇತ್ರದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಲಿ: ಪ್ರಶಾಂತ್ ಕುಮಾರ್

❑ ನೈಜ್ಯ ದೆಸೆ ನ್ಯೂಸ್

**ಯಾದಗಿರಿ: ಸಹಕಾರ ಕ್ಷೇತ್ರದ ಅಭಿವೃದ್ಧಿಯಲ್ಲಿ ಯುವಜನತೆಯ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸಹಕಾರ ಚಳವಳಿಯಲ್ಲಿ ತೊಡಗಿಸಿಕೊಳ್ಳುವ ಮೂಲಕ ಆರ್ಥಿಕವಾಗಿ ಸಬಲರಾಗಬೇಕು ಎಂದು ಯಾದಗಿರಿ ಸಹಕಾರ ಸಂಘಗಳ ಅಭಿವೃದ್ಧಿ ಅಧಿಕಾರಿ ಶ್ರೀ ಪ್ರಶಾಂತ್ ಕುಮಾರ್ ಕರೆ ನೀಡಿದರು.**

ನಗರದ ಸರಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ, ಬೆಂಗಳೂರು, ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ, ಯಾದಗಿರಿ ಹಾಗೂ ಸಹಕಾರ ಇಲಾಖೆ, ಯಾದಗಿರಿ ಇವರ ಸಂಂ-ಮುಕ್ತ ಆಶ್ರಯದಲ್ಲಿ “ಸಹಕಾರ ಕ್ಷೇತ್ರದಲ್ಲಿ ಯುವಜನತೆಯ ಪಾತ್ರ” ಕುರಿತು ಆಯೋಜಿಸಿದ್ದ ಕ್ಲಸ್ಟರ್ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಸಹಕಾರ ಚಳವಳಿಯನ್ನು ಮತ್ತಷ್ಟು ಬಲಪಡಿಸುವುದರಿಂದ ಆರ್ಥಿಕ ಅಭಿವೃದ್ಧಿ ಹಾಗೂ ಸಾಮಾಜಿಕ ಸಮೃದ್ಧಿಯನ್ನು ಸಾಧಿಸಲು ಸಾಧ್ಯವಾಗುತ್ತದೆ. ಸಹಕಾರ ಸಂಘಗಳು ಸಾಮಾನ್ಯ ಜನರ ಆರ್ಥಿಕ ಹಾಗೂ ಸಾಮಾಜಿಕ ಪ್ರಗತಿಗೆ ಪ್ರಮುಖ ವೇದಿಕೆಯಾಗಿವೆ. ಯುವಜನತೆ ಸಹಕಾರ ಕ್ಷೇತ್ರದ ಬಗ್ಗೆ ಅರಿವು ಹೊಂದಿ, ಅದರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಅಗತ್ಯವಿದೆ ಎಂದು ಹೇಳಿದರು.

ಸಹಕಾರ ಸಂಘಗಳ ರಚನೆ, ಸಂಘಗಳ ಉದ್ದೇಶ, ಕಾರ್ಯವೈಖರಿ ಹಾಗೂ ಸಹಕಾರ ಇಲಾಖೆಯಿಂದ ಸಂಘಗಳಿಗೆ ದೊರೆಯುವ ವಿವಿಧ ಯೋಜನೆಗಳು ಮತ್ತು ಸೌಲಭ್ಯಗಳ ಕುರಿತು ವಿದ್ಯಾರ್ಥಿಗಳಿಗೆ



ವಿವರವಾಗಿ ಮಾಹಿತಿ ನೀಡಿದರು. ಸಹಕಾರ ಸಂಘಗಳ ಮೂಲಕ ಜನರು ಒಗ್ಗೂಡಿ ತಮ್ಮ ಆರ್ಥಿಕ ಚಟುವಟಿ-ಕೆಗಳನ್ನು ಅಭಿವೃದ್ಧಿಪಡಿಸಿಕೊಳ್ಳಬಹುದಾಗಿದೆ. ಇಂತಹ ಸಂಘಗಳ ಕಾರ್ಯವೈಖರಿ ಹಾಗೂ ಸರ್ಕಾರದ ಯೋಜನೆಗಳ ಬಗ್ಗೆ ಯುವಜನತೆ ತಿಳಿದುಕೊಳ್ಳುವುದು ಅತ್ಯಂತ ಅವಶ್ಯಕವಾಗಿದೆ ಎಂದರು.

ಸಹಕಾರ ಕ್ಷೇತ್ರದಲ್ಲಿ ಯುವಕರು ಹಾಗೂ ಯುವತಿಯರಿಗೆ ಹೆಚ್ಚಿನ ಪ್ರಮಾಣದಲ್ಲಿ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವ ಅಗತ್ಯವಿದೆ. ಇಂತಹ ತರಬೇತಿಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸಿ, ದೊರೆಯುವ ಮಾಹಿತಿಯ ಸಂಪೂರ್ಣ ಪ್ರಯೋಜನ ಪಡೆದುಕೊಳ್ಳಬೇಕು. ವಿದ್ಯಾರ್ಥಿ ಜೀವನದಲ್ಲಿಯೇ ಸಹಕಾರ ಕ್ಷೇತ್ರದ ಕುರಿತು ಜ್ಞಾನ ಪಡೆದುಕೊಂಡರೆ ಮುಂದಿನ ದಿನಗಳಲ್ಲಿ ಸ್ವಯಂ ಉದ್ಯೋಗ, ಉದ್ಯಮಶೀಲತೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಉದ್ಯೋಗಾವಕಾಶಗಳನ್ನು ಪಡೆಯಲು ಸಹಕಾ-ರಿಯಾಗಲಿದೆ ಎಂದು ಪ್ರಶಾಂತ್ ಕುಮಾರ್ ತಿಳಿಸಿದರು.

ಸಹಕಾರ ಕ್ಷೇತ್ರದಿಂದ ಆರ್ಥಿಕ ಸಬಲೀಕರಣ ಸಾಧ್ಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸರಕಾರಿ ಬಾಲಕಿಂ-ಯರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ದಶರಥ ಕವಡಿ ಮಾತನಾಡಿ, ಸಹಕಾರ ಕ್ಷೇತ್ರವು ಸಮಾಜದ ವಿವಿಧ ವರ್ಗಗಳ ಜನರನ್ನು ಒಗ್ಗೂಡಿಸುವ ಶಕ್ತಿಯನ್ನು ಹೊಂದಿದೆ. ಯುವಜನತೆ ಸಹಕಾರ ಚಳವಳಿಯಲ್ಲಿ ಸಕ್ರಿಯವಾಗಿ ಪಾಲ್ಗೊಂಡಾಗ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಆರ್ಥಿಕ ಚಟುವಟಿ-ಕೆಗಳು ಮತ್ತಷ್ಟು ಚುರುಕುಗೊಳ್ಳುತ್ತವೆ ಎಂದರು.

ವಿದ್ಯಾರ್ಥಿಗಳು ಕೇವಲ ಪಠ್ಯಪುಸ್ತಕದ ಜ್ಞಾನಕ್ಕೆ ಸೀಮಿತವಾಗದೆ, ಸಮಾಜ ಹಾಗೂ ದೇಶದ ಆರ್ಥಿಕ ವ್ಯವಸ್ಥೆಯ ಕುರಿತು ತಿಳಿದುಕೊಳ್ಳಬೇಕು. ಸಹಕಾರ ಕ್ಷೇತ್ರದ ಕುರಿತು ಇಂತಹ ತರಬೇತಿ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ, ಸಂಘಟನಾ ಸಾಮಥ-ರ್ಥ್ಯ ಹಾಗೂ ಸಾಮಾಜಿಕ ಜವಾಬ್ದಾರಿಯ ಮನೋಭಾವ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟದ ಪ್ರಭಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಮತಿ ಸುಜಾತ ಮಠ ಅವರು ಸಹಕಾರ ಕ್ಷೇತ್ರದಲ್ಲಿ ಯುವಜನತೆಯ ಪಾತ್ರ ಹಾಗೂ ಸಹಕಾರ ಚಳವಳಿಯ ಮಹತ್ವದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಸಹಕಾರದ ಮೂಲ ಉದ್ದೇಶ, ಸಂಘಟಿತ ಪ್ರಯತ್ನದ ಮಹತ್ವ ಹಾಗೂ ಸಮಾಜದ ಆರ್ಥಿಕ ಅಭಿವೃದ್ಧಿಯಲ್ಲಿ ಸಹಕಾರ ಸಂಘಗಳ ಕೊಡುಗೆಯ ಕುರಿತು ವಿವರಿಸಿದರು.

ವಿದ್ಯಾರ್ಥಿಗಳಿಗೆ ಸಹಕಾರ ಚಳವಳಿಯ ಅರಿವು ಮೂಡಿಸುವ ಅಗತ್ಯ ಇಂದಿನ ಯುವಜನತೆ ದೇಶದ ಭವಿಷ್ಯವಾಗಿದ್ದು, ಅವ-ರಿಗೆ ಸಹಕಾರ ಕ್ಷೇತ್ರದ ಬಗ್ಗೆ ಸಮರ್ಪಕವಾದ ಅರಿವು ಮೂಡಿಸುವುದು ಅಗತ್ಯವಾಗಿದೆ. ವಿದ್ಯಾರ್ಥಿಗಳು ಸಹಕಾರ ಸಂಘಗಳ ಕಾರ್ಯವೈಖರಿ, ಸರ್ಕಾರದ ವಿವಿಧ ಯೋಜನೆಗಳು, ಸಂಘಗಳ ಮೂಲಕ ದೊರೆಯುವ ಸೌಲಭ್ಯಗಳು ಹಾಗೂ ಸಹಕಾರ ಕ್ಷೇತ್ರದಲ್ಲಿರುವ ಅವಕಾಶಗಳನ್ನು ತಿಳಿದುಕೊಳ್ಳಬೇಕು. ಇದರಿಂದ ಭವಿಷ್ಯದಲ್ಲಿ ಉದ್ಯೋಗ ಹಾಗೂ ಸ್ವಯಂ ಉದ್ಯೋಗದ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಸಾಧ್ಯವಾಗುತ್ತದೆ ಎಂದು ಕಾರ್ಯಕ್ರಮದಲ್ಲಿ ತಿಳಿಸಲಾಯಿತು.

ಸಹಕಾರ ಕ್ಷೇತ್ರದಲ್ಲಿ ಯುವಜನತೆಯ ಹೆಚ್ಚಿನ



ಪಾಲ್ಗೊಳ್ಳುವಿಕೆಯಿಂದ ಸಹಕಾರ ಚಳವಳಿಗೆ ಹೊಸ ಚೈತನ್ಯ ದೊರೆಯಲಿದೆ. ಯುವಕರಲ್ಲಿ ಸಂಘಟನಾ ಮನೋಭಾವ ಹಾಗೂ ಸಾಮಾಜಿಕ ಹೊಣೆಗಾರಿಕೆಯನ್ನು ಬೆಳೆಸುವ ಮೂಲಕ ಬಲಿಷ್ಠ ಸಹಕಾರ ವ್ಯವಸ್ಥೆಯನ್ನು ನಿರ್ಮಿಸಲು ಸಾಧ್ಯವಾಗುತ್ತದೆ ಎಂಬ ಅಭಿಪ್ರಾಯ ವ್ಯಕ್ತವಾಯಿತು. ಕಾರ್ಯಕ್ರಮದಲ್ಲಿ ಸರಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ಶ್ರೀ ಅಶೋಕ ಎಸ್.ಎಂ. ಅವರು ಅತಿಥಿಯಾಗಿ ಭಾಗವಹಿಸಿದ್ದರು. ಎನ್‌ಎಸ್‌ಎಸ್ ಸಂಯೋಜಕರಾದ ಶ್ರೀ ಮರಿಯಪ್ಪ ಅವರು ಕಾರ್ಯಕ್ರಮದ ನಿರೂಪಣೆ ಹಾಗೂ ಸ್ವಾಗತ ನೆರವೇರಿಸಿದರು. ಉಪನ್ಯಾಸಕರಾದ ಶ್ರೀ ಸಾಬಣ್ಣ ಜುಬೇರಿ ಅವರು ವಂದನಾರ್ಪಣೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಹಕಾರ ಕ್ಷೇತ್ರದ ಕುರಿತು ಮಾಹಿತಿ ಪಡೆದುಕೊಂಡರು. ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101